ಸುದ್ದಿ ಸಿಂಚನ



ಮಂಗಳವಾರ ಸಂಜೆ ಬೀಸಿದ ಭಾರಿ ಗಾಳಿಯಿಂದ ನಾಪೋಕ್ಲು ಸಮೀಪದ ಬಲಮುರಿ ಗ್ರಾಮದ ನಿವಾಸಿ ಚಂಗಂಡ ಸೂರಜ್ ಅವರ ಮನೆ ಮೇಲ್ಛಾವಣಿಗೆ ಹಾನಿಯಾಗಿರುತ್ತದೆ. ಘಟನಾಸ್ಥಳಕ್ಕೆ ಕಂದಾಯ ಪರಿವೀಕ್ಷಕ ರವಿಕುಮಾರ್‌ಹಾಗೂ ಸಿಬ್ಬಂದಿ ಭೇಟಿ ನೀಡಿ ಪರಿಶೀಲಿಸಿ ಮೇಲಾಧಿಕಾರಿಗಳಿಗೆ ಮಾಹಿತಿ ರವಾನಿಸಿದ್ದಾರೆ.

ಆರೋಪಿ ಸೆರೆ

ಮಂಗಳೂರು: ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯ ವಿವಿಧ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿದ್ದ ಕಳವು ಹಾಗೂ ಗೋಹತ್ಯೆ ನಿಷೇಧ ಕಾಯ್ದೆ ಸಂಬಂಧಿತ ಪ್ರಕರಣಗಳಲ್ಲಿ ನ್ಯಾಯಾಲಯದಿಂದ ಜಾರಿಯಾಗಿದ್ದ ಜಾಮೀನು ರಹಿತ ವಾರಂಟ್ ಗಳನ್ನು ತಪ್ಪಿಸಿಕೊಂಡು 2018 ರಿಂದ ತಲೆಮರೆಸಿಕೊಂಡಿದ್ದ ಆರೋಪಿಯನ್ನು ಬಂಧಿಸಲಾಗಿದೆ. ಕಾಸರಗೋಡು ಜಿಲ್ಲೆ ಉಪ್ಪಳ ಪೈವಳಿಕೆಯ ಅಬೂಬಕ್ಕರ್‌ಸಿದ್ದಿಕ್ ಅಲಿಯಾಸ್ ಕಾಪ್ರಿ ಸಿದ್ದಿಕ್ ಬಂಧಿತ ಆರೋಪಿ.

2 ಸಾವಿರಕ್ಕೂ ಅಧಿಕ ಕಾಫಿ ಗಿಡ ಕಡಿದ ದುಷ್ಕರ್ಮಿಗಳು

ಬಿರುನಾಣಿ ಸಮೀಪ ಕಳಕೂರಿನಲ್ಲಿ ದುಷ್ಕೃತ್ಯ | ತಪ್ಪಿತಸ್ಥರ ಪತ್ತೆ ಹಚ್ಚಿ ಕಠಿಣ ಶಿಕ್ಷೆಗೆ ಗ್ರಾಮಸ್ಥರ ಒತ್ತಾಯ

• **ಕನ್ನಡಪ್ರಭ ವಾರ್ತೆ** ಪೊನ್ನಂಪೇಟೆ

ಪೊನ್ನಂಪೇಟೆ ತಾಲೂಕು ಬಿರುನಾಣಿ ಗ್ರಾಮದಲ್ಲಿ ಫಸಲು ಬರುವ ಸುಮಾರು 2 ಸಾವಿರಕ್ಕೂ ಅಧಿಕ ಕಾಫಿ ಗಿಡ ಮತ್ತು ಸುಮಾರು 250ಕ್ಕೂ ಅಧಿಕ ಅಸಲು ಬರುವ ಕಾಳು ಮೆಣಸು ಬಳ್ಳಿಗಳನ್ನು ದುಷ್ಕರ್ಮಿಗಳು ಕಡಿದು ಹಾಕಿರುವ ಅಮಾನುಷ ಘಟನೆ ಬಿರುನಾಣಿ ಸಮೀಪ ಕಳಕೂರು ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಕುಪ್ಪಣಮಾಡ ಗೌತಮ್ ಅವರಿಗೆ ಸೇರಿದ ಸುಮಾರು ಮೂರುವರೆ ಎಕ್ರೆ ಜಾಗದಲ್ಲಿ ಹೊಸದಾಗಿ ಮಾಡಿದ್ದ ಏಳೆಂಟು ವರ್ಷದ ಕಾಫಿ ಗಿಡ ಹಾಗೂ ಕಾಳುಮೆಣಸು ಬಳ್ಳಿಗಳನ್ನು ದುಷ್ಕರ್ಮಿಗಳು ಕತ್ತಿಯಿಂದ ಕಡಿದಿದ್ದು ಇದರ ಬಗ್ಗೆ ಶ್ರೀಮಂಗಲ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಈ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆಯಿಂದ ದುಷ್ಕರ್ಮಿಗಳನ್ನು ಪತ್ತೆಹಚ್ಚಲು ಮಡಿಕೇರಿಯಿಂದ ಶ್ವಾನ ದಳವನ್ನು ಸ್ಥಳಕ್ಕೆ ಕರೆತರಲಾಗಿದೆ. ಪೊಲೀಸರು ದುಷ್ಕರ್ಮಿಗಳನ್ನು ಪತ್ತೆಹಚ್ಚಲು ತನಿಖೆ ಮುಂದುವರಿಸಿದ್ದಾರೆ.

ತೋಟದಲ್ಲಿ ಅಳವಡಿಸಿದ್ದ ಎರಡು ಸಿಸಿ ಕ್ಯಾಮೆರಾಗಳನ್ನು ದುಷ್ಕರ್ಮಿಗಳು ಕಿತ್ತೊಯ್ದಿದ್ದು ಬೆಳೆಗಾರ ಗೌತಮ್ ಅವರು ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಮೈಸೂರಿನಲ್ಲಿ ಮದುವೆಗೆ ಹೋದ ಸಮಯವನ್ನು ಅರಿತು ದುಷ್ಕರ್ಮಿಗಳು ಕಾಫಿ ಗಿಡಗಳನ್ನು ಕಡಿದಿತ್ತಿರುವುದು ಕಂಡುಬಂದಿದೆ. ಸ್ಥಳಕ್ಕೆ ಶ್ರೀಮಂಗಲ ಪೊಲೀಸ್ ಠಾಣಾಧಿಕಾರಿ ರವೀಂದ್ರ ಹಾಗೂ ಸಿಬ್ಬಂದಿ ಆಗಮಿಸಿ, ದುಷ್ಕರ್ಮಿಗಳ ಸುಳಿವು ಪತ್ತೆಹಚ್ಚಲು ತನಿಖೆ ಕೊಂಡಿದ್ದಾರೆ. ಸ್ಥಳಕ್ಕೆ ಗ್ರಾಮಸ್ಥರು ಆಗಮಿಸಿ ಇಂತಹ ಅಮಾನುಷ ಘಟನೆಯನ್ನು ಖಂಡಿಸಿದ್ದಾರೆ.



ಕುಪ್ಪಣಮಾಡ ಗೌತಮ್ ಅವರಿಗೆ ಸೇರಿದ ತೋಟದಲ್ಲಿ ಕಾಫಿ ಗಿಡಗಳನ್ನು ಕಡಿದಿರುವುದು.

ಈ ಅಮಾನುಷ ಘಟನೆಯಿಂದ ಬೆಳೆಗಾರ ಗೌತಮ್ ಅವರಿಗೆ ಲಕ್ಷಾಂತರ ರೂಪಾಯಿ ನಷ್ಟವಾಗಿದ್ದು ಬಹಳಷ್ಟು ಕಾಫಿ ಗಿಡಗಳನ್ನು ಮತ್ತು ಕಾಳುಮೆಣಸು ಬಳ್ಳಿಗಳನ್ನು ನೆಲಸಮವಾಗಿ ಕತ್ತರಿಸಲಾಗಿದ್ದು, ಮತ್ತೆ ಅದು ಚಿಗುರುವ ಸಾಧ್ಯತೆ ಇಲ್ಲದೆ ಇರುವುದರಿಂದ ಹೊಸದಾಗಿ ತೋಟ ಮಾಡಬೇಕಾದ ಅನಿವಾರ್ಯತೆ ಇದೆ ಎಂದು ಗ್ರಾಮಸ್ಥರು ಬೆಳೆಗಾರರ ಪರವಾಗಿ ತೀವ್ರ ನೋವು ವ್ಯಕ್ತಪಡಿಸಿದರು.



ಶ್ವಾನದಳದಿಂದ ಆರೋಪಿಗಳ ಸುಳಿವು ಪತ್ತೆ ಪ್ರಯತ್ನ.

ಈ ದುಷ್ಕೃತ್ಯವನ್ನು ಒಂದಿಬ್ಬರು ಮಾಡಲು ಸಾಧ್ಯವಿಲ್ಲ. ಕನಿಷ್ಠ ಎಂಟರಿಂದ ಹತ್ತು ಜನರು ಮಾಡಿರುವ ಸಾಧ್ಯತೆ ಇದೆ. ಸುಮಾರು 2, ಸಾವಿರಕ್ಕೂ ಹೆಚ್ಚು ಕಾಫಿ ಗಿಡಗಳನ್ನು ಕಡಿಯುವುದು ಸಾಮಾನ್ಯ ವ್ಯಕ್ತಿಗಳಿಗೆ ಸಾಧ್ಯವಾಗುವುದಿಲ್ಲ. ಆದ್ದರಿಂದ ಇಂತಹ ಕೃತ್ಯಗಳು ಮುಂದೆ ಎಲ್ಲಿಯೂ ನಡೆಯಬಾರದು. ಆದ್ದರಿಂದ ಅಂತಹ ಕೃತ್ಯದಲ್ಲಿ ಪಾಲ್ಗೊಂಡವರು ಹಾಗೂ ಕುಮ್ಮಕ್ಕು ನೀಡಿದವರ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ. ಪೊಲೀಸ್ ಇಲಾಖೆ ಇಂತಹ ದುಷ್ಕರ್ಮಿಯನ್ನು ಪತ್ತೆ ಹಚ್ಚಿ ಕಠಿಣ ಶಿಕ್ಷೆಗೆ ಒಳಪಡಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

■ ಪೊನ್ನಂಪೇಟೆ ತಾಲೂಕು ಬಿರುನಾಣಿ ಗ್ರಾಮದಲ್ಲಿ ಫಸಲು ಬರುವ ಸುಮಾರು 2 ಸಾವಿರಕ್ಕೂ ಅಧಿಕ ಕಾಫಿ ಗಿಡ ಮತ್ತು ಸುಮಾರು 250ಕ್ಕೂ ಅಧಿಕ ಅಸಲು ಬರುವ ಕಾಳು ಮೆಣಸು ಬಳ್ಳಿಗಳನ್ನು ದುಷ್ಕರ್ಮಿಗಳು ಕಡಿದು ಹಾಕಿರುವ ಅಮಾನುಷ ಘಟನೆ ಬಿರುನಾಣಿ ಸಮೀಪ ಕಳಕೂರು ಗ್ರಾಮದಲ್ಲಿ ನಡೆದಿದೆ.

ಈ ಸಂದರ್ಭ ಹುದಿಕೇರಿ ಕಂದಾಯ ಪರಿವೀಕ್ಷರ ಸಂತೋಷ್ ಭೇಟಿ ನೀಡಿ ಪರಿಶೀಲಿಸಿದರು. ಪೊನ್ನಂಪೇಟೆ ಬಗರ್‌ಹುಕುಂ ಸಕ್ರಮೀಕರಣ ಸಮಿತಿ ಅಧ್ಯಕ್ಷ ಅಣ್ಣಳಮಾಡ ಲಾಲಾ ಅಪ್ಪಣ್ಣ, ಕರ್ತಮಾಡ ನಂದಾ, ಕುಪ್ಪಣಮಾಡ ಪ್ರೀತಮ್, ಕಾಳಿಮಾಡ ರಶಿಕ, ಕಳಕಂಡ ಜೀತು ಕುಶಾಲಪ್ಪ, ಕುಪ್ಪಣಮಾಡ ಜೀವನ್, ಕಾಳಿಮಾಡ ಸಂಪಾ, ಅಣ್ಣಳಮಾಡ ಗಿರೀಶ್, ಸೇರಿದಂತೆ ನೂರಾರು ಗ್ರಾಮಸ್ಥರು ಆಗಮಿಸಿ ದುಷ್ಕೃತ್ಯವನ್ನು ಖಂಡಿಸಿದರು.

ಗೋಣಿಕೊಪ್ಪ: ಸರಣಿ ರಕ್ತದಾನ, ಅಂಗಾಂಗ ದಾನ ಶಿಬಿರ

ರಕ್ತದಾನ, ಅಂಗಾಂಗ ದಾನ ಎರಡೂ ಜೀವ ಉಳಿಸುವ ಮಹಾದಾನಗಳಾಗಿವೆ: ಜಗದೀಶ್ ಜೋಡುಬೀಟಿ

• **ಕನ್ನಡಪ್ರಭ ವಾರ್ತೆ** ಗೋಣಿಕೊಪ್ಪ

ಅಕ್ಷಯ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಸರಣಿ ರಕ್ತದಾನಮತ್ತು ಅಂಗಾಂಗ ದಾನ ಶಿಬಿರ ಗೋಣಿಕೊಪ್ಪ ಸಮುದಾಯ ಆರೋಗ್ಯ ಕೇಂದ್ರದಲ್ಲಿ ನಡೆಯಿತು.

ಗೋಣಿಕೊಪ್ಪ ಗ್ರಾಮ ಪಂಚಾಯಿತಿ, ಗೋಣಿಕೊಪ್ಪ ಸಮುದಾಯ ಆರೋಗ್ಯ ಕೇಂದ್ರ, ಇಂಡಿಯನ್ ರೆಡ್ ಕ್ರಾಸ್ ಸೊಸೈಟಿ ಪೊನ್ನಂಪೇಟೆ, ಗೋಣಿಕೊಪ್ಪ ಸಮುದಾಯ ಆರೋಗ್ಯ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಅಂಗಾಂಗ ದಾನ ಮತ್ತು ರಕ್ತದಾನ ಶಿಬಿರ ಆಯೋಜಿಸಲಾಯಿತು.

ಅಕ್ಷಯ ಚಾರಿಟೇಬಲ್ ಟ್ರಸ್ಟ್ ಸ್ಥಾಪಕ ಅಧ್ಯಕ್ಷ ಕೆ. ಕೆ ಸೋಮಯ್ಯ ಸಭಾಧ್ಯಕ್ಷತೆಯಲ್ಲಿ ಗೋಣಿಕೊಪ್ಪ ಗ್ರಾಮ ಪಂಚಾಯಿತಿ ಅಧ್ಯಕ್ಷ ಕುಲ್ಲಚಂಡ ಪ್ರಮೋದ್ ಗಣಪತಿ ಮತ್ತು ಪತ್ರಕರ್ತ, ಸಮಾಜ ಸೇವಕ ಜಗದೀಶ್ ಜೋಡಬೀಟ ಜ್ಯೋತಿ ಬೆಳಗಿಸಿ ಶಿಬಿರಕ್ಕೆ ಚಾಲನೆ ನೀಡಿದರು.

ನಂತರ ಮಾತನಾಡಿದ ಕುಲ್ಲಚಂಡ ಪ್ರಮೋದ್ ಗಣಪತಿ, ರಕ್ತದಾನದ ಶ್ರೇಷ್ಠತೆಯನ್ನು ಸಮಾಜಕ್ಕೆ ತಿಳಿಸುವ ಮೂಲಕ ಯುವ ಸಮುದಾಯದಲ್ಲಿ ಪ್ರೇರಣೆಯನ್ನು ತುಂಬಬೇಕಾಗಿದೆ ಎಂದರು.

ಕಥೆಗಾರ , ಪತ್ರಕರ್ತ ಜಗದೀಶ್ ಜೋಡುಬೀಟಿ ಮಾತನಾಡಿ, ರಕ್ತದಾನ ಮತ್ತು ಅಂಗಾಂಗ ದಾನ ಎರಡೂ ಜೀವ ಉಳಿಸುವ ಮಹಾದಾನಗಳಾಗಿವೆ. ಒಂದು ತಾತ್ಕಾಲಿಕ ಸಹಾಯವಾದರೆ, ಇನ್ನೊಂದು ದೀರ್ಘಕಾಲದ ಚೇತನ, ಇಂತಹ ಚೈತನ್ಯ ಪ್ರಧಾನವಾದದಿವಟ್ಟಿಗೆಯನ್ನು ಹೊತ್ತಿಸುತ್ತ ಜನರಡೆಗೆ ತಲುಪಿಸುವ ಮಾರ್ಗವನ್ನು ಕಂಡುಕೊಂಡ ಅಕ್ಷಯ ಚಾರಿಟೇಬಲ್ ಟ್ರಸ್ಟ್ ಸಮಾಜ ಸೇವೆ ಮಾದರಿಯ ನಡೆ ಎಂದು ಹೇಳಿದರು.

ಹಿರಿಯ ನಾಗರಿಕ ಸೇವಾ ಪ್ರಶಸ್ತಿ ವಿಜೇತೆ ಹಾಗೂ ದಾನಿ ಕೈಬುಲಿರ ಪಾರ್ವತಿ ಬೋಪಣ್ಣ ಮಾತನಾಡಿ, ರಕ್ತದಾನ ಮತ್ತು ಅಂಗಾಂಗ ದಾನಗಳ ಬಗ್ಗೆ ಯುವಕರು ಪ್ರೇರಣೆಯಾಗಬೇಕು. ಈ ಮೂಲಕ ಮತ್ತೊಂದು ಜೀವವನ್ನು ಉಳಿಸುವ ಕಾರ್ಯದಲ್ಲಿ ತೊಡಗಿಸಿಕೊಳ್ಳಬೇಕು ಎಂದು ಹೇಳಿದರು.



ಕಾರ್ಯಕ್ರಮದಲ್ಲಿ ರಕ್ತದಾನ ಹಾಗೂ ಅಂಗಾಂಗ ದಾನ ಮಾಡಿದವರನ್ನು ಸನ್ಮಾನಿಸಲಾಯಿತು.

ಅಕ್ಷಯ ಚಾರಿಟೇಬಲ್ ಟ್ರಸ್ಟ್ನ ಸ್ಥಾಪಕ ಅಧ್ಯಕ್ಷ ಕೆ.ಕೆ ಸೋಮಯ್ಯ ಮಾತನಾಡಿ, ಹಣಗಳಿಸುವುದಷ್ಟೇ ಮನುಷ್ಯನ ಜೀವನದ ಉದ್ದೇಶವಾಗಿರಬಾರದು. ತನ್ನ ಸುತ್ತಮುತ್ತಲಿನವರಿಗೆಮತ್ತುಸಮಾಜಕ್ಕೆಮಾದರಿಯಾಗಿ ಸೇವೆ ನೀಡುವುದು ಕೂಡ ಒಂದು ಪುಣ್ಯದ ಕಾರ್ಯವಾಗಿದೆ. ಈ ಉದ್ದೇಶದೊಂದಿಗೆ ಅಕ್ಷಯ ಚಾರಿಟೇಬಲ್ ಟ್ರಸ್ಟ್ ಸಮಾಜಮುಖಿಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದರು.

ಶಿಕ್ಷಣ ಇಲಾಖೆ ವಿಷಯ ಪರಿವೀಕ್ಷಕಿ ಕೆ.ಆರ್ ಬಿಂದು, ರಕ್ತದಾನದ ಮಹತ್ವದ ಬಗ್ಗೆ ಅರಿವು ನೀಡಿದರು.

ಸಮಾಜ ಸೇವಕಿ, ಪತ್ರಕರ್ತೆ ರೇಖಾ ಶ್ರೀಧರ್, ಉದ್ಯಮಿಕುಮಾರ್, ಸಮಾಜ ಸೇವಕ ಪುಳಿಂಜನ ಪೂವಯ್ಯ ಕಾರ್ಯಕ್ರಮದ ಮಹತ್ವದ ಬಗ್ಗೆ ಮಾತನಾಡಿದರು.

ಕೊಡವ ಅಕಾಡಮಿ ಸದಸ್ಯ ಹಾಗೂ ಗೋಣಿಕೊಪ್ಪ ಸವಿತ ಸಮಾಜ ಅಧ್ಯಕ್ಷ ನಾಯಂದಿರ ಶಿವಾಜಿ, ಖ್ಯಾತ ಉದ್ಯಮಿ ಲಕ್ಷ್ಮಿರೆಡ್ಡಿ, ಮಡಿಕೇರಿ ವೈದ್ಯಕೀಯ ವಿಜ್ಞಾನ ಸಂಸ್ಥೆಯ ವೈದ್ಯ ಕರಂಬಯ್ಯ, ದೈಹಿಕ ಶಿಕ್ಷಣ ಮತ್ತು ಯೋಗ ಶಿಕ್ಷಕಿ ಅಲೀಮಾ ಪಿ.ಹೆಚ್, ಸಮುದಾಯ ಆರೋಗ್ಯ ಕೇಂದ್ರದ ವೈದ್ಯ ಡಾ. ಸುರೇಶ್, ಡಾ. ಗ್ರೀಷ್ಮ ಬೋಜಮ್ಮ, ಕಾಪ್ಸ್ ವಿದ್ಯಾ ಸಂಸ್ಥೆಯ ವ್ಯವಸ್ಥಾಪಕ ಸೋಮಯ್ಯ ಇದ್ದರು.

ಹಲವು ಬಾರಿ ರಕ್ತದಾನ ಮಾಡಿದ ಕೊಡಗು ಬ್ಲಡ್ ಡೋನರ್ಸ್ ಅಸೋಸಿಯೇಷನ್ ಅಧ್ಯಕ್ಷ ಎಂ.ಎ.ಅಶ್ರಫ್, ಪತ್ರಕರ್ತ ಅರುಣ್‌ಕುಮಾರ್ ವಿ.ವಿ , ಕಾಫಿ ಬೆಳೆಗಾರ ತೆಲಚಂಡ ಲೋಹಿತ್ ಸುಬ್ಬಯ್ಯ, ಧನಲಕ್ಷ್ಮಿ ಗೋಣಿಕೊಪ್ಪ, ಪ್ರಿಯಾ ಟಿ.ಎಂ ಮತ್ತು ರಕ್ತದಾನ ಮತ್ತು ಅಂಗಾಂಗ ದಾನ ಮಾಡಿದ ಪತ್ರಕರ್ತ ಜಗದೀಶ್ ಜೋಡಬೀಟಿ ಅವರನ್ನು ಸನ್ಮಾನಿಸಲಾಯಿತು.

ಕುಶಾಲನಗರ: ಮಂಡೆಪಂಡ ಬೋಸ್ ಮೊಣ್ಣಪ್ಪಗೆ ಗೌರವ

ಕುಶಾಲನಗರ ನಿವೃತ್ತ ಸರ್ಕಾರಿ ನೌಕರರ ಸಂಘ ನೇತೃತ್ವದಲ್ಲಿ ಗೌರವಾರ್ಪಣೆ

ಕುಶಾಲನಗರ: ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ ವತಿಯಿಂದ ರಾಜ್ಯಮಟ್ಟದ ಕಾಯಕಯೋಗಿ ಪ್ರಶಸ್ತಿ ಪಡೆದ ಮಂಡೆಪಂಡ ಬೋಸ್ ಮೊಣ್ಣಪ್ಪ ಅವರನ್ನು ಕುಶಾಲನಗರ ಹಿರಿಯ ನಾಗರಿಕರ ವೇದಿಕೆಯ ಆಶ್ರಯದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಕುಶಾಲನಗರ ನಿವೃತ್ತ ಸರ್ಕಾರಿ ನೌಕರರ ಸಂಘದ ಕಟ್ಟಡ ಸಭಾಂಗಣದಲ್ಲಿ ನಡೆದ ಸರಳ ಕಾರ್ಯಕ್ರಮದಲ್ಲಿ ಸ್ಥಾಪಕ ಅಧ್ಯಕ್ಷರಾದ ಎಂ ಎಚ್ ನಜೀರ್ ಅಹ್ಮದ್ ಅವರ ನೇತೃತ್ವದಲ್ಲಿ ಸನ್ಮಾನಿಸಿದರು. ಕಾರ್ಯದರ್ಶಿ ಕೆಂಚಪ್ಪ, ಖಜಾಂಚಿ ವಿ ಆರ್‌ಹೆಗ್ಡೆ, ಸಲಹೆಗಾರರಾದ ದಿವಾಕರ್, ಜಂಟಿ ಕಾರ್ಯದರ್ಶಿ ರಾಜಪ್ಪ, ಕೆ ಎ ನಾಣಯ್ಯ ಮತ್ತು ಆಡಳಿತ ಮಂಡಳಿ ಸದಸ್ಯರು ಇದ್ದರು.



ರಾಜ್ಯಮಟ್ಟದ ಕಾಯಕಯೋಗಿ ಪ್ರಶಸ್ತಿ ಪಡೆದ ಮಂಡೆಪಂಡ ಬೋಸ್ ಮೊಣ್ಣಪ್ಪ ಅವರನ್ನು ಕುಶಾಲನಗರ ಹಿರಿಯ ನಾಗರಿಕರ ವೇದಿಕೆಯ ಆಶ್ರಯದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ನವೀನ್ ಡಿಸೋಜ, ಹಿರಿಕರ ರವಿಗೆ ದತ್ತಿನಿಧಿ ಪ್ರಶಸ್ತಿ





■ ಕಾಸರಗೋಡು ಜಿಲ್ಲಾ ಕನ್ನಡ ಪತ್ರಕರ್ತರ ಕ್ಷೇಮಾಭಿವೃದ್ಧಿ ಸಂಘದಿಂದ ನೀಡುವ ವಾರ್ಷಿಕ ದತ್ತಿನಿಧಿ ಪ್ರಶಸ್ತಿಗೆ ಕೊಡಗು ಜಿಲ್ಲೆಯ ವರದಿಗಾರರಾದ ನವೀನ್ ಡಿ ಸೋಜ ಹಾಗೂ ಹಿರಿ ಕರ ರವಿ ಆಯ್ಕೆಯಾಗಿದ್ದಾರೆ.

ಮಡಿಕೇರಿ: ಕಾಸರಗೋಡು ಜಿಲ್ಲಾ ಕನ್ನಡ ಪತ್ರಕರ್ತರ ಕ್ಷೇಮಾಭಿವೃದ್ಧಿ ಸಂಘದಿಂದ ನೀಡುವ ವಾರ್ಷಿಕ ದತ್ತಿನಿಧಿ ಪ್ರಶಸ್ತಿಗೆ ಕೊಡಗು ಜಿಲ್ಲೆಯ ವರದಿ ಗಾರರಾದ ನವೀನ್ ಡಿ ಸೋಜ ಹಾಗೂ ಹಿರಿ ಕರ ರವಿ ಆಯ್ಕೆ ಯಾ ಗಿದ್ದಾರೆ.

ಉದ್ಯಮಿ ಶಿವಶಂಕರ ನೆಕ್ರಾಜೆ ನೀಡುವ ದತ್ತಿನಿಧಿ ಪ್ರಶಸ್ತಿಗೆ ಆಂದೋಲನ ದಿನಪತ್ರಿಕೆಯ ಕೊಡಗು ಜಿಲ್ಲಾ ವರದಿಗಾರ ನವೀನ್ ಡಿಸೋಜ ಆಯ್ಕೆಯಾಗಿದ್ದರೆ. ನಿವೃತ್ತ ಹಿರಿಯ ಐಎಎಸ್ ಅಧಿಕಾರಿ ಡಾ. ಸಿ. ಸೋಮಶೇಖರ ನೀಡುವ ದತ್ತಿನಿಧಿ ಪ್ರಶಸ್ತಿಗೆ ಸೋಮವಾರಪೇಟೆ ವಿಜಯವಾಣಿ ವರದಿಗಾರ ಹಿರಿಕರ ರವಿ ಆಯ್ಕೆಯಾಗಿದ್ದಾರೆ. ಕಾಸರಗೋಡು ಜಿಲ್ಲಾ ಕನ್ನಡ ಪತ್ರಕರ್ತರ ಕ್ಷೇಮಾಭಿವೃದ್ಧಿ ಸಂಘ, ಕರ್ನಾಟಕ ಗಡಿಪದೇಶ ಅಭಿವೃದ್ಧಿ ಪ್ರಾಧಿಕಾರ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಮೇ 16ರಂದು ಕಾಸರಗೋಡಿನಲ್ಲಿ ನಡೆಯಲಿರುವ ದತ್ತಿನಿಧಿ ಪ್ರಶಸ್ತಿ ಪ್ರದಾನ ಹಾಗೂ ಕನ್ನಡ ಸಂಸ್ಕೃತಿ ಉತ್ಸವ ಕಾರ್ಯಕ್ರಮದಲ್ಲಿ ಜಿಲ್ಲೆಯ ಇಬ್ಬರು ಸೇರಿದಂತೆ ರಾಜ್ಯದ ವಿವಿಧೆಡೆಯ ಒಟ್ಟು 18 ಮಂದಿ ಪ್ರಶಸ್ತಿ ಸ್ವೀಕರಿಸಲಿದ್ದಾರೆ. ಸಣ್ಣ ನೀರಾವರಿ ಸಚಿವ ಎನ್.ಎಸ್. ಬೋಸರಾಜು, ವಿಧಾನಸಭೆ ಉಪಸಭಾಧ್ಯಕ್ಷ ರುದ್ರಪ್ಪ ಲಮಾಣಿ, ಶಾಸಕ ಎ.ಕೆ.ಎಂ. ಅಶ್ರಫ್, ಕರ್ನಾಟಕ ಗಡಿ ಪದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್, ಕರ್ನಾಟಕ ಕನಿಷ್ಠ ವೇತನ ಸಲಹಾ ಮಂಡಳಿ ಅಧ್ಯಕ್ಷ ಟಿ.ಎಂ. ಶಾಹೀದ್, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಇತರರು ಪಾಲ್ಗೊಳ್ಳಲಿದ್ದಾರೆ.



ಸಾಹಿತ್ಯ–ಶಿಕ್ಷಣ–ಸಮಾಜ ಸೇವೆಯ ಸಮನ್ವಯ ಸಾಧಕ

ಪುತ್ತೂರು ಉಮೇಶ್ ನಾಯಕ್

ಪುತ್ತೂರು ಉಮೇಶ್ ನಾಯಕ್ ಅವರು ಸಾಹಿತ್ಯ, ಶಿಕ್ಷಣ ಹಾಗೂ ಸಮಾಜ ಸೇವಾ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಬಹುಮುಖ ವ್ಯಕ್ತಿತ್ವ. ಚಿಂತನೆ, ಕ್ರಿಯಾಶೀಲತೆ ಮತ್ತು ಮಾನವೀಯ ಸೇವಾಭಾವದ ಮೂಲಕ ಪುತ್ತೂರು ತಾಲೂಕು ಮಾತ್ರವಲ್ಲದೆ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ವಿಶಿಷ್ಟ ಗುರುತನ್ನು ನಿರ್ಮಿಸಿಕೊಂಡಿರುವ ಅವರು, ಸಮಾಜದ ವಿವಿಧ ಹಂತಗಳ ಮೇಲೆ ಸ್ಪಷ್ಟವಾದ ಸಕಾರಾತ್ಮಕ ಪ್ರಭಾವ ಬೀರಿರುವ ಸೇವಾ ಸಾಧಕರು.



ಪ್ರಸ್ತುತ ಪುತ್ತೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿರುವ ಅವರು, ಕಳೆದ ನಾಲ್ಕು ವರ್ಷಗಳಿಂದ ತಾಲೂಕಿನ 32 ಗ್ರಾಮಗಳಲ್ಲಿ ಪ್ರತಿಮಾಸವೂ ಮಕ್ಕಳ ಸಾಹಿತ್ಯ ಸಮ್ಮೇಳನದ ಸ್ವರೂಪದ ಗ್ರಾಮ ಸಾಹಿತ್ಯ ಸಂಭ್ರಮ ಎಂಬ ವಿನೂತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳುತ್ತಿದ್ದಾರೆ. ಗ್ರಾಮ ಸಾಹಿತ್ಯ ಸಂಭ್ರಮದಲ್ಲಿ ವಿದ್ಯಾರ್ಥಿ ಕವಿ ಗೋಷ್ಠಿ ಜೊತೆಗೆ ವಿನೂತನ ಪ್ರಯೋಗಗಳಾದ ಬಾಲಕಥಾಗೋಷ್ಠಿ, ಪ್ರವಾಸ ಕಥನ ಲೇಖನ, ನನ್ನ ಆಪ್ತಮಿತ್ರ ಲೇಖನ, ನನ್ನ ನೆಚ್ಚಿನ ಶಿಕ್ಷಕ ಲೇಖನ ಗೋಷ್ಠಿಗಳನ್ನು ಅಳವಡಿಸಿಕೊಂಡು ಯುವ ಜನತೆಯನ್ನು ಸಾಹಿತ್ಯ ಕ್ಷೇತ್ರದತ್ತ ಬರಮಾಡಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. 250ಕ್ಕೂ ಹೆಚ್ಚು ವಿವಿಧ ಕ್ಷೇತ್ರಗಳ ಸಾಧಕರನ್ನು ಗ್ರಾಮ ಮಟ್ಟದಲ್ಲಿ ಗುರುತಿಸಿ ಗೌರವಿಸಿದ್ದಾರೆ. 100ಕ್ಕೂ ಅಧಿಕ ಹೊಸ ಕೃತಿಗಳ ಪ್ರಕಟಣೆಗೆ ಮಾರ್ಗದರ್ಶನ ನೀಡಿ ಉದಯೋನ್ಮುಖ ಸಾಹಿತಿಗಳಿಗೆ ಬೆಂಬಲ ನೀಡಿದ್ದಾರೆ.

ಪುತ್ತೂರು ತಾಲೂಕಿನಲ್ಲಿ ಸುಮಾರು 20 ವರ್ಷಗಳಿಂದ ನಿಂತುಹೋದ ಕರ್ನಾಟಕ ರಾಜ್ಯೋತ್ಸವದ ಕನ್ನಡ ಭುವನೇಶ್ವರಿಯ ಭವ್ಯ ಮೆರವಣಿಗೆಯನ್ನು ಪುತ್ತೂರಿನ ಶಾಸಕರಾದ ಅಶೋಕ್ ರೈ ಯವರ ಮಾರ್ಗದರ್ಶನದಲ್ಲಿ ಸುಮಾರು 50ಕ್ಕೂ ಹೆಚ್ಚು ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಪುನರಾರಂಭಿಸಿ, ರಾಜ್ಯೋತ್ಸವದ ಅಂಗವಾಗಿ ನಡೆಯುವ ಸನ್ಮಾನವನ್ನು ತಾಲೂಕು ರಾಜ್ಯೋತ್ಸವ ಪ್ರಶಸ್ತಿ ಸ್ವರೂಪಕ್ಕೆ ತಂದ ಪ್ರಮುಖ ವ್ಯಕ್ತಿ. ಜಿಲ್ಲೆಯಲ್ಲಿ ತಾಲೂಕು ಮಟ್ಟದಲ್ಲಿ ರಾಜ್ಯೋತ್ಸವ ಪ್ರಶಸ್ತಿ ವ್ಯವಸ್ಥಿತವಾಗಿ ನಡೆಯುತ್ತಿರುವುದು ಪುತ್ತೂರಿನಲ್ಲಿ ಮಾತ್ರ ಎನ್ನುವುದು ಗಮನಾರ್ಹ.

ಕನ್ನಡದಲ್ಲೂ ಐಎಎಸ್ ಬರೆಯಿರಿ' ಅಭಿಯಾನ

ಶಿಕ್ಷಣ ಕ್ಷೇತ್ರದಲ್ಲಿ ಇವರ ಕೊಡುಗೆ ವಿಶೇಷವಾಗಿದೆ. ಕನ್ನಡ ಮಾಧ್ಯಮ ವಿದ್ಯಾರ್ಥಿಗಳ ಸ್ಪರ್ಧಾತ್ಮಕ ಭವಿಷ್ಯವನ್ನು ಗಮನದಲ್ಲಿರಿಸಿ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಐಎಎಸ್ ಅಧಿಕಾರಿಗಳಾಗಬೇಕೆಂಬ ಮಹಾದಾಸೆಯಿಂದ ಕನ್ನಡದಲ್ಲೂ ಐಎಎಸ್ ಪರೀಕ್ಷೆ ಬರೆಯಿರಿ ಎಂಬ ಅಭಿಯಾನವನ್ನು ಆರಂಭಿಸಿ, 200ಕ್ಕೂ ಅಧಿಕ ಐಎಎಸ್- ಐಪಿಎಸ್ ಹಾಗೂ ತತ್ಸಮಾನ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಮಾಹಿತಿ ಕಾರ್ಯಾಗಾರಗಳನ್ನು ಕನ್ನಡದಲ್ಲೇ ನಡೆಸಿ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಅರಿವನ್ನುಂಟು ಮಾಡುವಲ್ಲಿ ಯಶಸ್ವಿಯಾಗಿದ್ದಾರೆ.

ಗ್ರಾಮಮಟ್ಟದಲ್ಲಿ ಸಾಹಿತ್ಯ ಸಂಭ್ರಮ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ಜಾಗೃತಿ ಕಾರ್ಯಕ್ರಮಗಳನ್ನು ಸಂಯೋಜಿತವಾಗಿ ನಡೆಸಿರುವುದು ರಾಜ್ಯದ ಕನ್ನಡ ಸಾಹಿತ್ಯ ಪರಿಷತ್ತು ಇತಿಹಾಸದಲ್ಲೇ ವಿನೂತನ ಪ್ರಯತ್ನವಾಗಿದೆ.

ಸಾಹಿತ್ಯ ಕ್ಷೇತ್ರದಲ್ಲಿ ಅವರು ಸಾಧಕ ಲೇಖಕರಾಗಿಯೂ ಗುರುತಿಸಿಕೊಂಡಿದ್ದಾರೆ. ಇತಿಹಾಸ ಪ್ರಸಿದ್ಧ ಪುತ್ತೂರು ಶ್ರೀ ಮಹಾಲಿಂಗೇಶ್ವರ ದೇವಸ್ಥಾನದ ಸಂಕ್ಷಿಪ್ತ ಸ್ಥಳಪುರಾಣವಾದ ಸ್ವಯಂಭೂ ಮಹಾಲಿಂಗೇಶ್ವರ ಕೃತಿಯನ್ನು ರಚಿಸಿದ್ದು, ಈ ಕೃತಿ ಧಾರ್ಮಿಕ ದತ್ತಿ ಇಲಾಖೆಯಿಂದ ಪ್ರಕಟವಾಗಿದೆ. ಇದಲ್ಲದೆ ಇನ್ನೂ ಮೂರು ಕೃತಿಗಳನ್ನು ರಚಿಸಿ ಕನ್ನಡ ಸಾಹಿತ್ಯಕ್ಕೆ ತಮ್ಮ ಕೊಡುಗೆಯನ್ನು ನೀಡಿದ್ದಾರೆ.

ನಿರ್ಗತಿಕರ ಪುನರ್ವಸತಿ ಸೇವೆ: ಪುತ್ತೂರು ಉಮೇಶ್ ನಾಯಕ್ ಅವರ ಸೇವಾ ಬದುಕಿನ ಅತ್ಯಂತ ಸ್ಪರ್ಶಕ ಅಧ್ಯಾಯವೆಂದರೆ ನಿರ್ಗತಿಕರು, ಭಿಕ್ಷುಕರು ಮತ್ತು ಅನಾಥರ ಪುನರ್ವಸತಿ ಕಾರ್ಯ. ಕಳೆದ ಹತ್ತು ವರ್ಷಗಳಲ್ಲಿ 100ಕ್ಕೂ ಅಧಿಕ ನಿರ್ಗತಿಕರನ್ನು ಪುನರ್ವಸತಿ ಕೇಂದ್ರಗಳಿಗೆ ಸೇರಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಸಂಕಲ್ಪದೊಂದಿಗೆ ಅವರಿಗೆ ಹೊಸ ಬದುಕಿನ ಆಶಾಕಿರಣ ನೀಡಿದ್ದಾರೆ. ವಿಶೇಷವಾಗಿ ಎಚ್‌ಐವಿ ಪೀಡಿತ ಓರ್ವ ಮಹಿಳೆ ಹಾಗೂ ಇಬ್ಬರು ಮಕ್ಕಳನ್ನು ರಕ್ಷಿಸಿ, ಅವರಿಗೆ ವೈದ್ಯಕೀಯ ನೆರವು, ಆಶ್ರಯ ಮತ್ತು ವಿದ್ಯಾಭ್ಯಾಸದ ವ್ಯವಸ್ಥೆ ಕಲ್ಪಿಸಿರುವುದು ಇವರ ಮಾನವೀಯತೆಯ ಮಾದರಿಯಾಗಿದೆ.



ಕನ್ನಡಪ್ರಭ ಮತ್ತು ಸುವರ್ಣ ನ್ಯೂಸ್ ವತಿಯಿಂದ ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ 'ಸುವರ್ಣ ಕನ್ನಡಿಗ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಗೌರವಗಳು :
ಇವರ ಸಾಹಿತ್ಯಿಕ, ಶೈಕ್ಷಣಿಕ ಹಾಗೂ ಸಮಾಜಮುಖಿ ಸೇವೆಗಳನ್ನು ಗುರುತಿಸಿ 2020ರಲ್ಲಿ ರೋಟರಿ ಅನ್ಸಂಗ್ ಹೀರೋ ಪ್ರಶಸ್ತಿ ಹಾಗೂ 2025ರಲ್ಲಿ ಪುತ್ತೂರು ತಾಲೂಕು ಗಣರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಇತ್ತೀಚೆಗೆ ಕನ್ನಡಪ್ರಭ ಏಷಿಯಾನೆಟ್ ಸುವರ್ಣನ್ಯೂಸ್ನ ಸುವರ್ಣ ಕನ್ನಡಿಗ' ಪ್ರಶಸ್ತಿಗೆ ಭಾಜನರಾಗಿದ್ದು, ಇವರ ಸಮಾಜಸೇವೆಗೆ ದೊರೆತ ಮುಕುಟವಾಗಿದೆ.

ತಮ್ಮ ಒಡಹುಟ್ಟಿದ ಡೌನ್ ಸಿಂಡ್ರೋಮ್ ಸಹೋದರ ಸುರೇಶ್ ನಾಯಕ್ ಅವರನ್ನು ಸಮಾಜದ ಮುಖ್ಯ ವಾಹಿನಿಗೆ ತರುವಲ್ಲಿ ಹಾಗೂ ಅವರಿಗೆ ಜಾದೂ ಪ್ರರ್ಶನ ಕಲಿಸಿ ಅವರ ಪ್ರತಿಭೆಯನ್ನು ಪ್ರಪಂಚಕ್ಕೆ ತೋರಿಸಿಕೊಟ್ಟಿದ್ದಾರೆ. ಅವರು ದೇಶದಾದ್ಯಂತ ಇದುವರೆಗೆ 500 ಕ್ಕೂ ಅಧಿಕ ಉಚಿತ ಪ್ರದರ್ಶನಗಳ ಮೂಲಕ ಬುದ್ಧಿಮಾಂದ್ಯತಾ ಜನಜಾಗೃತಿಯನ್ನು ಮೂಡಿಸಿದ್ದಾರೆ. ಉಡುಪಿಯ ಡೌನ್ ಸಿಂಡ್ರೋಮ್ ಈಜುಗಾರ್ತಿ ಅರ್ಚನಾ ಜೈ ವಿಠ್ಠಲ್, ಮೈಸೂರಿನ ದಿವ್ಯಾಂಗ ಕೀ ಬೋರ್ಡ್ ಕಲಾವಿದ ಶ್ರೀ ಗಣೇಶ್ ಭಟ್ ಹಾಗೂ ಡೌನ್ ಸಿಂಡ್ರೋಮ್ ಜಾದೂಗಾರ ಸುರೇಶ ನಾಯಕ್ ಇವರಿಗೆ ವಿಶ್ವ ಅಂಗವಿಕಲ ದಿನಾಚರಣೆಯ ರಾಷ್ಟ್ರಪತಿಗಳ ರಾಷ್ಟ್ರ ಪ್ರಶಸ್ತಿ ದೊರಕುವಲ್ಲಿ ಮಹತ್ತರ ಪಾತ್ರ ವಹಿಸಿದ್ದಾರೆ.

ಪ್ರಸ್ತುತ ಅವರು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನಲ್ಲಿ ಶ್ರೀರಾಮ್ ಶೇರ್ಸ್ ಅಂಡ್ ಫೈನಾನ್ಷಿಯಲ್ ಕನ್ಸಲ್ಟೆಂಟ್ ಎಂಬ ಸಂಸ್ಥೆಯ ಆಡಳಿತ ನಿರ್ದೇಶಕರಾಗಿದ್ದು, ಈ ಸಂಸ್ಥೆಯ ಮೂಲಕ ಶೇರು ಉದ್ಯಮವನ್ನು ನಡೆಸುತ್ತಿದ್ದಾರೆ. ಪತ್ನಿ ರೂಪಶ್ರೀ ನಾಯಕ್, ಪುತ್ರ ಸಾತ್ವಿಕ್ ನಾಯಕ್ ಹಾಗೂ ಸಹೋದರ ಸುರೇಶ್ ನಾಯಕ್ ಹಾಗೂ ಪೋಷಕರೊಂದಿಗೆ ಪುತ್ತೂರಿನಲ್ಲಿ ವಾಸವಾಗಿದ್ದಾರೆ (ದೂರವಾಣಿ: 9844401295).

ಕನ್ನಡಪ್ರಭ
ಶುಕ್ರವಾರ 8.05.2026

25ನೇ ವರ್ಷದ ಸಂಭ್ರಮ
ಕರಾವಳಿ ಪ್ರಭಾವಳಿ

ಗರಿಷ್ಠ 28 c | ಕನಿಷ್ಠ 21 c

ಅನಧಿಕೃತ ಹೋಂಸ್ಟೇ ವಿರುದ್ಧ ಕಠಿಣ ಕ್ರಮ: ಎಸಿ ಎಚ್ಚರಿಕೆ

ಮಾಲೀಕರು ಕಡ್ಡಾಯವಾಗಿ ಷರತ್ತು ಪಾಲಿಸಲು ಸೂಚನೆ | ಅಧಿಕೃತ ಪೋರ್ಟಲ್ ಮೂಲಕವೇ ಅರ್ಜಿ ಸಲ್ಲಿಸಲು ಆದೇಶ

• **ಕನ್ನಡಪ್ರಭ ವಾರ್ತೆ** ಮಡಿಕೇರಿ

ಪ್ರವಾಸಿಗರ ಸುರಕ್ಷತೆ ಗಮನದಲ್ಲಿಟ್ಟುಕೊಂಡು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹೋಂ-ಸ್ಟೇಗಳು ಅಧಿಕೃತ ಅನುಮೋದನೆ ಪಡೆಯುವುದು ಕಡ್ಡಾಯವಾಗಿದೆ. ಕೊಡಗು ಜಿಲ್ಲಾ ವ್ಯಾಪ್ತಿಯಲ್ಲಿ ನೋಂದಣಿ ಪತ್ರ ಪಡೆಯದೇ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಹೋಂ-ಸ್ಟೇ ಮಾಲೀಕರು ಪ್ರವಾಸೋದ್ಯಮ ಇಲಾಖೆಯ ಅಧಿಕೃತ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಿ, ನೋಂದಣಿ ಪತ್ರ ಪಡೆದ ನಂತರವೇ ಹೋಂ-ಸ್ಟೇಗಳನ್ನು ನಡೆಸುವಂತೆ ಸೂಚಿಸಲಾಗಿದೆ.

ನೋಂದಣಿ ಮಾಡಿಸದೆ ಅನಧಿಕೃತವಾಗಿ ಹೋಂ-ಸ್ಟೇಗಳು ಕಾರ್ಯನಿರ್ವಹಿಸುತ್ತಿರುವುದು ಕಂಡು ಬಂದಲ್ಲಿ ಅಂತಹ ಹೋಂ-ಸ್ಟೇಗಳ ವಿರುದ್ಧ ಕರ್ನಾಟಕ ಪ್ರವಾಸೋದ್ಯಮ ವ್ಯಾಪಾರ (ಸೌಲಭ್ಯ ಮತ್ತು ನಿಯಂತ್ರಣ) ಅಧಿನಿಯಮ-2015ರಡಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು.

ಹೋಂ-ಸ್ಟೇ ನಡೆಸುವ ಮಾಲೀಕರು ಕಡ್ಡಾಯವಾಗಿ ಷರತ್ತು ಪಾಲಿಸುವುದು. ಎಲ್ಲಾ ಅಸ್ತಿತ್ವದಲ್ಲಿರುವ ಮತ್ತು ಹೊಸ ಹೋಂಸ್ಟೇಗಳು ಕರ್ನಾಟಕ ಸರ್ಕಾರದ ಪ್ರವಾಸೋದ್ಯಮ ಇಲಾಖೆಯಲ್ಲಿ ನೋಂದಾಯಿಸಿಕೊಳ್ಳುವುದು ಕಡ್ಡಾಯವಾಗಿದೆ. ನೋಂದಾಯಿತ ಹೋಂಸ್ಟೇಗಳ ಪಟ್ಟಿಯನ್ನು ಪ್ರವಾಸೋದ್ಯಮ ಇಲಾಖೆಯ ವೆಬ್‌ಸೈಟ್ ನಲ್ಲಿ ಪ್ರದರ್ಶಿಸಲಾಗುತ್ತದೆ.

ಸಮಯದ ಹಂಚಿಕೆಯ ಆಧಾರದ ಮೇಲೆ ಯಾವುದೇ ಕೊಠಡಿಗಳನ್ನು ಬಾಡಿಗೆಗೆ ನೀಡುವಂತಿಲ್ಲ. ಹೋಂ-ಸ್ಟೇ ಪ್ರವೇಶಿಸುವ ಮುಖ್ಯ ದ್ವಾರದಲ್ಲಿ ಅನುಮತಿ ಪತ್ರ ಹಾಗೂ ಪರವಾನಿಗೆ ಪತ್ರಗಳನ್ನು ಪ್ರದರ್ಶಿಸಬೇಕು. ಬಾಡಿಗೆ ಅಥವಾ ಲೀಸ್ ಅಥವಾ ಉಪ ಬಾಡಿಗೆ ಮನೆಗಳನ್ನು ಹೋಂ-ಸ್ಟೇಗಳಾಗಿ ನೋಂದಾಯಿಸಲು ಅವಕಾಶವಿಲ್ಲ. ಹೋಂ-ಸ್ಟೇ ಮಾಲೀಕರು ಕಡ್ಡಾಯವಾಗಿ ಈ ಸ್ಥಳದಲ್ಲಿ ವಾಸವಿರತಕ್ಕದ್ದು. ಹೋಂ-ಸ್ಟೇನಲ್ಲಿ ಕಡ್ಡಾಯವಾಗಿ ಸಿಸಿಟಿವಿ ಅಳವಡಿಸುವುದು, ಸಿ.ಸಿ ಟಿವಿಯು 24★7 ಚಾಲ್ತಿಯಲ್ಲಿರುವುದು ಹಾಗೂ 30 ದಿನಗಳ ಪುಟೇಜ್‌ಗಳನ್ನು ಸಂಗ್ರಹಿಸಿಟ್ಟುಕೊಳ್ಳುವುದು ಹಾಗೂ ಸಿಸಿ ಟಿವಿಯನ್ನು ಸರಿಯಾಗಿ ನಿರ್ವಹಿಸುವುದು.

ಹೋಂ-ಸ್ಟೇಗೆ ನೇಮಿಸಿಕೊಳ್ಳುವ ಸಿಬ್ಬಂದಿ ಹಿನ್ನಲೆ ಪರಿಶೀಲನೆ (Background verification) ಅನ್ನು ಪೊಲೀಸ್ ಇಲಾಖೆಯ ಮುಖಾಂತರ ಕಡ್ಡಾಯವಾಗಿ ನಡೆಸುವುದು. ಅತಿಥಿಗಳ ಸಮಸ್ಯೆಗಳನ್ನು ಪರಿಣಾಮಕಾರಿಯಾಗಿ ಪರಿಹರಿಸಲು ಹೋಂ-ಸ್ಟೇ ಸ್ವಾಗತದಲ್ಲಿ Feed Back ರಿಜಿಸ್ಟರ್, ದೂರು ರಿಜಿಸ್ಟರ್‌ಮತ್ತು ಪ್ರತಿಕ್ರಿಯೆ ಪುಸ್ತಕ ನಿರ್ವಹಿಸುವುದು. ಹೋಂ-ಸ್ಟೇ ನಡೆಸುವ ಮಾಲೀಕರು ಕಡ್ಡಾಯವಾಗಿ ಬಂದಂತಹ ಅತಿಥಿಗಳಿಗೆ ಬೆಳಗ್ಗಿನ ಉಪಹಾರವನ್ನು ನೀಡುವುದು.

ಸ್ವಚ್ಚತೆ, ಆರೋಗ್ಯ, ನೈರ್ಮಲ್ಯ ಮತ್ತು ಅಗ್ನಿ ಸುರಕ್ಷತೆಗೆ ಸೇರಿದಂತೆ ಸುರಕ್ಷತಾ ಕ್ರಮಗಳನ್ನು ತಪ್ಪದೇ ಅನುಸರಿಸಬೇಕು. ಕಡ್ಡಾಯವಾಗಿ ಒಣ ತ್ಯಾಜ್ಯ ಹಾಗೂ ಹಸಿ ತ್ಯಾಜ್ಯಗಳ ಸಂಗ್ರಹಣೆಗೆ ಪ್ರತ್ಯೇಕ ಕಸದ ಬುಟ್ಟಿಗಳನ್ನು ಇಡುವುದು. ಮರುಬಳಕೆ, ನವೀಕರಿಸಬಹುದಾದ ಇಂಧನ ಮೂಲಗಳ ಬಳಕೆಮತ್ತು ತ್ಯಾಜ್ಯದ ಸರಿಯಾದ ವಿಲೇವಾರಿಯನ್ನು ಕಡ್ಡಾಯವಾಗಿ ಪ್ರೋತ್ಸಾಯಿಸುವುದು. ಯಾವುದೇ ಕಾರಣಕ್ಕೂ ಪ್ಲಾಸ್ಟಿಕ್ ತ್ಯಾಜ್ಯಗಳನ್ನು ಸುಡುವಂತಿಲ್ಲ. ಹೋಂಸ್ಟೇ ಸ್ಥಳೀಯ ಅಲಂಕಾರ, ಅಧಿಕೃತ ಪಾಕ ಪದ್ಧತಿ, ಸ್ಥಳೀಯ ಚಟುವಟಿಕೆಗಳು ಇತ್ಯಾದಿಗಳ ಮೂಲಕ ಸ್ಥಳೀಯ ಅನುಭವವನ್ನು ಅತಿಥಿಗಳಿಗೆ ಒದಗಿಸಬೇಕು.

ಹೋಂಸ್ಟೇ ಮಾಲೀಕರು ಆಗಮಿಸಿರುವ ಅತಿಥಿಗಳು ಸಾರ್ವಜನಿಕರಿಗೆ ತೊಂದರೆ ನೀಡದಂತೆ ಅಥವಾ ನೆರೆಹೊರೆಯವರಿಗೆ ತೊಂದರೆ ನೀಡದಂತೆ ಖಚಿತಪಡಿಸಿಕೊಳ್ಳಬೇಕು. ಹೋಂಸ್ಟೇ ಕನಿಷ್ಠ 1 (ಒಂದು) ಮತ್ತು ಗರಿಷ್ಠ 6 (ಆರು) ಬಾಡಿಗೆ ಕೊಠಡಿಗಳನ್ನು ಒದಗಿಸಬೇಕು. ಹೋಂಸ್ಟೇ ಗರಿಷ್ಠ 12 (ಹನ್ನೆರಡು) ಹಾಸಿಗೆಗಳನ್ನು ಹೊಂದಿರಬಹುದು. ಮಕ್ಕಳಿಗಾಗಿ ಹಾಸಿಗೆಗಳನ್ನು ಹೊರತುಪಡಿಸಿ ಒಂದು ಕೋಣೆಯಲ್ಲಿ 3 (ಮೂರು) ಕ್ಕಿಂತ ಹೆಚ್ಚು ಹಾಸಿಗೆಗಳು ಇರುವಂತಿಲ್ಲ. ಹೋಂಸ್ಟೇಯಲ್ಲಿ ಯಾವುದೇ ಕೊಠಡಿಯನ್ನು ಡಾರ್ಮಿಟರಿಯಾಗಿ ನಿರ್ವಹಿಸಲಾಗುವುದಿಲ್ಲ ಮತ್ತು ಹೋಂಸ್ಟೇಯಲ್ಲಿ ಬಂಕ್ ಹಾಸಿಗೆಗಳನ್ನು ಒದಗಿಸಲಾಗುವುದಿಲ್ಲ. ಯಾವುದೇ ಸಮಯದಲ್ಲಿ ಗರಿಷ್ಠ 12 ವಯಸ್ಕರು ಹೋಂಸ್ಟೇಯಲ್ಲಿ ಅತಿಥಿಗಳಾಗಿ ಉಳಿಯಬಹುದು.

ಇವುಗಳಲ್ಲದೇ ಮಾಹಿತಿ ಇಲ್ಲದೆ ಅನಧಿಕೃತವಾಗಿ ನಡೆಸುತ್ತಿರುವಂತಹ ಹೋಂ-ಸ್ಟೇಗಳ ಬಗ್ಗೆ ಹಾಗೂ ಹೋಂ-ಸ್ಟೇ ನೋಂದಣಿ ಮಾಡಿಕೊಳ್ಳುವ ಬಗ್ಗೆ ಸಾರ್ವಜನಿಕರು ದೂರು/ಮಾಹಿತಿ ಇದ್ದಲ್ಲಿ ಅವುಗಳ ವಿವರಗಳನ್ನು ಪತ್ರ ಮುಖೇನ ಉಪ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಸ್ಟುವರ್ಟ್ ಹಿಲ್ ರಸ್ತೆ, ಮಡಿಕೇರಿ, ಕೊಡಗು ಜಿಲ್ಲೆ-571201 ದೂರವಾಣಿ ಸಂಖ್ಯೆ: 08272-200519 ಇ-ಮೇಲ್: ddkodagutourism@gmail.com ಅಥವಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿ ದೂರವಾಣಿ ಸಂಖ್ಯೆ: 08272-229000 ಇ-ಮೇಲ್:dcmcr@ksp.gov.in ಅಥವಾ spmcr@ksp.gov.in ಗೆ ತಿಳಿಸಬಹುದು.

ಜಿಲ್ಲೆಯಲ್ಲಿ ಅನಧಿಕೃತ ಹೋಂ-ಸ್ಟೇಗಳಿಗೆ ಕಡಿವಾಣ ಹಾಕಲು ಜಿಲ್ಲೆಯ ಜನತೆ ಕೈ ಜೋಡಿಸಿ ತಮ್ಮ ಅಕ್ಕ ಪಕ್ಕದಲ್ಲಿ ಯಾವುದೇ ಪರವಾನಿಗೆ ಪಡೆಯದೇ ಅನಧಿಕೃತವಾಗಿ ನಡೆಸುತ್ತಿರುವ ಹೋಂ-ಸ್ಟೇಗಳ ವಿವರಗಳನ್ನು ನೀಡಿ ಅತೀ ಅಗತ್ಯ ಸಹಕಾರವನ್ನು ನೀಡುವಂತೆ ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.


ಸಾಂಕೇತಿಕ ಚಿತ್ರ

▪ ಅಧಿಕಾರಿಗಳು ತಪಾಸಣೆ ನಡೆಸುವ ಸಮಯದಲ್ಲಿ ಹೋಂ-ಸ್ಟೇ ಸಂಬಂಧಿಸಿದ ದಾಖಲಾತಿಗಳು ಹಾಗೂ ನೇಮಿಸಿಕೊಂಡ ನೌಕರರ ದಾಖಲಾತಿಗಳು, ರಿಜಿಸ್ಟರ್ ಪುಸ್ತಕ ಹಾಗೂ ಸಿಸಿ ಟಿವಿಗಳ ಡಾಟಾಗಳನ್ನು ಪರಿಶೀಲಿಸುವ ಸಮಯದಲ್ಲಿ ಮಾಲೀಕರು ಸಹಕರಿಸುವುದು.

▪ ಹೋಂ-ಸ್ಟೇನಲ್ಲಿ ಅತಿಥಿಗಳು ಯಾವುದೇ ಕಾನೂನು ಬಾಹಿರ ಚಟುವಟಿಕೆಗಳನ್ನು ನಡೆಸುವುದು ಕಂಡುಬಂದಲ್ಲಿ ಹತ್ತಿರದ ಪೊಲೀಸ್ ಠಾಣೆಗೆ ಮಾಹಿತಿ ನೀಡುವುದು. ಪ್ರವಾಸೋದ್ಯಮ ಇಲಾಖೆಯ ಅನುಮೋದನೆ ಅಥವಾ ನೋಂದಣಿ ಇಲ್ಲದೇ ಹೋಂ-ಸ್ಟೇಗಳು ಕಾರ್ಯನಿರ್ವಹಿಸುತ್ತಿರುವ ಕಾನೂನ ಬಾಹಿರವೆಂದು ಪರಿಗಣಿಸಲಾಗಿ ಹೋಂ-ಸ್ಟೇ ಮಾಲೀಕರು ಮತ್ತು ಪ್ರವರ್ತಕರ ವಿರುದ್ಧ ಕೆ.ಟಿ.ಟಿ.ಎಫ್ ಕಾಯ್ದೆ-2015ರಡಿ ಕಾನೂನು ಕ್ರಮ ಕೈಗೊಳ್ಳಲಾಗುವುದು. ಅತಿಥಿಗಳು ಬಂದಾಗ ಹೋಂ-ಸ್ಟೇ ರಿಜಿಸ್ಟರ್‌ನಲ್ಲಿ ಅವರ ಹೆಸರು, ಪೂರ್ಣ ವಿಳಾಸ, ಮೊಬೈಲ್ ಸಂಖ್ಯೆ, ವಾಹನ ಸಂಖ್ಯೆ ಪಡೆಯುವುದು ಹಾಗೂ ವಿದೇಶಿಯರು ಬಂದಾಗ ಅವರ ವೀಸ ಪಾಸ್‌ಪೋರ್ಟ್ ಪರಿಶೀಲಿಸಿ ರಿಜಿಸ್ಟರ್‌ನಲ್ಲಿ ಕಡ್ಡಾಯವಾಗಿ ನಮೂದಿಸತಕ್ಕದ್ದು. (ಎಲೆಕ್ಟ್ರಾನಿಕ್ ಮಾಧ್ಯಮ ಅಥವಾ ಭೌತಿಕವಾಗಿ) ವಿದೇಶಿಯರ ಮಾಹಿತಿ ಪೊಲೀಸ್ ಇಲಾಖೆಗೆ (ಸಿ' ಫಾರಂ ನಲ್ಲಿ ನೀಡುವುದು) ಅಥವಾ ನಿಗದಿತ ಮಾರ್ಗಸೂಚಿಗಳ ಪ್ರಕಾರ ಸಲ್ಲಿಸುವುದು.

ಸುದ್ದಿ ಸಿಂಚನ

ನಾಪೋಕ್ಲು ಶಾಲೆಯಿಂದ ಆರು ಟ್ಯಾಬ್ ಕಳವು



ನಾಪೋಕ್ಲು: ಇಲ್ಲಿನ ಕೆಪಿಎಸ್ ಪ್ರಾಥಮಿಕ ಶಾಲೆಯ ಆರು ಟ್ಯಾಬ್‌ಗಳು, ಒಂದು ಲ್ಯಾಪ್‌ಟಾಪ್ ಸೇರಿದಂತೆ ತರಗತಿ ಕೊಠಡಿಗಳ ಕೀ ಬಂಚ್ ಕಳವಾಗಿದ್ದು, ನಾಪೋಕ್ಲು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಶಾಲೆಯ ಅಧ್ಯಾಪಕರ ಕೊಠಡಿ ಹಿಂಬದಿ ಯಿಂದ ಕಿಟಕಿ ಗಾಜು ಒಡೆದು ಕಳ್ಳರು ಒಳಗೆ ನುಗ್ಗಿ ಕಳ್ಳತನ ಮಾಡಿದ್ದಾರೆ. ಶಾಲೆ ಮುಖ್ಯ ಶಿಕ್ಷಕಿ ನಳಿನಿ ಬೆಳಗ್ಗೆ ಶಾಲೆಗೆ ಆಗಮಿಸಿದಾಗ ಪ್ರಕರಣ ಬೆಳಕಿಗೆಬಂದಿದೆ. ತಕ್ಷಣ ಅವರು ಇಲ್ಲಿಯ ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದಾರೆ. ಪೊಲೀಸರು ಸ್ಥಳಕ್ಕೆ ಆಗಮಿಸಿ ಮಹಜರು ನಡೆಸಿದ ಬಳಿಕ ಮಡಿಕೇರಿಯಿಂದ ಶ್ವಾನದಳ ಹಾಗೂ ಬೆರಳಚ್ಚು ತಜ್ಞರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮಾಹಿತಿ ಸಂಗ್ರಹಿಸಿದರು.

ಹಲ್ಲೆ ಆರೋಪಿಗಳ ಬಂಧನ

ನಾಪೋಕ್ಲು: ಬೇತು ಗ್ರಾಮದ ಆಟೋ ಚಾಲಕ ಝಕಾರಿಯ ಎಂಬವರ ಮೇಲೆ ಸೋಮವಾರ ನಡೆದ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗಳನ್ನು ಇಲ್ಲಿನ ಪೊಲೀಸರು ಬಂಧಿಸಿದ್ದಾರೆ. ಸ್ಥಳೀಯ ನಿವಾಸಿ ನಾಫಿ (22), ರುಮಾನ್ (21), ಸಿದ್ದೀಕ್ (20) ಎಂಬವರನ್ನು ಇಲ್ಲಿಯ ಪೊಲೀಸರು ಬಂಧಿಸಿದ್ದಾರೆ. ಆರೋಪಿಗಳು ಬಳಸಿದ್ದ ಒಂದು ಕಾರನ್ನು ವಶಪಡಿಸಿಕೊಳ್ಳಲಾಗಿದೆ. ಇನ್ನೊಬ್ಬ ಆರೋಪಿ ಮಹಮ್ಮದ್ ಆಲಿ ತಲೆಮರೆಸಿಕೊಂಡಿದ್ದು, ಆರೋಪಿಯ ಪತ್ತೆಗೆ ಪೊಲೀಸರು ಬಲೆ ಬೀಸಿದ್ದಾರೆ.

ನಿಧನ ವಾರ್ತೆ

ಮನು ಮುತ್ತಣ್ಣ



ನಾಪೋಕ್ಲು: ಇಲ್ಲಿಗೆ ಸಮೀಪದ ಕೊಳಕೇರಿ ಗ್ರಾಮದ ಬೊಮ್ಮಂಜಿ ಕೇರಿಯ ನಿವಾಸಿ ತಟ್ಟಂಡ ನಾಣಯ್ಯ ಅವರ ಪುತ್ರ ಮನು ಮುತ್ತಣ್ಣ (40) ಬುಧವಾರ ಅನಾರೋಗ್ಯದಿಂದ ನಿಧನರಾದರು. ಅಂತ್ಯಕ್ರಿಯೆ ಗುರುವಾರ ಸ್ವಗ್ರಾಮದಲ್ಲಿ ಜರುಗಿತು. ಮೃತರು ತಂದೆ, ತಾಯಿ, ಪತ್ನಿ ಹಾಗೂ ಎರಡು ಗಂಡು ಮಕ್ಕಳನ್ನು ಅಗಲಿದ್ದಾರೆ.

ಸಂತ ಅಂತೋಣಿ ಚರ್ಚ್ ಮಹೋತ್ಸವಕ್ಕೆ ಚಾಲನೆ

ರೆ.ಫಾ. ಎಡ್ವರ್ಡ್ ವಿಲಿಯಂ ಸಲ್ಡಾನಾರಿಂದ ಧ್ವಜಾರೋಹಣ



ರೇ.ಫಾ. ಎಡ್ವರ್ಡ್ ವಿಲಿಯಂ ಸಲ್ಡಾನಾ ಹಾಗೂ ಇತರ ಗುರುಗಳು ಧ್ವಜಾರೋಹಣ ನೆರವೇರಿಸಿದರು.

• **ಕನ್ನಡಪ್ರಭ ವಾರ್ತೆ** ಸುಂಟಿಕೊಪ್ಪ

ಇಲ್ಲಿನ ಸಂತ ಅಂತೋಣಿ ದೇವಾಲಯದ ವಾರ್ಷಿಕ ಮಹೋತ್ಸವ ಅಂಗವಾಗಿ ಮೇ 7ರಿಂದ 10ರವರೆಗೆ ನಡೆಯುವ ಪಾಲಕ ಸಂತ ಅಂತೋಣಿ ಅವರ ವಾರ್ಷಿಕೋತ್ಸವಕ್ಕೆ ಮೈಸೂರು ಧರ್ಮಕ್ಷೇತ್ರದ ವಿದ್ಯಾಸಂಸ್ಥೆಗಳ ಕಾರ್ಯದರ್ಶಿ ರೇ.ಫಾ. ಎಡ್ವರ್ಡ್ ವಿಲಿಯಂ ಸಲ್ಡಾನಾ ಧ್ವಜಾರೋಹಣ ನೇರವೇರಿಸುವ ಮೂಲಕ ವಿಧ್ಯುಕ್ತ ಚಾಲನೆ ನೀಡಿದರು.

ಗುರುವಾರ ಸಂಜೆ ದೇವಾಲಯದ ಆವರಣದಲ್ಲಿ ಧ್ವಜಾರೋಹಣ ನೆರವೇರಿಸುವ ಮೂಲಕ ದಿವ್ಯ ಬಲಿಪೂಜೆಯನ್ನು ಮೈಸೂರು ಧರ್ಮಕ್ಷೇತ್ರದ ವಿದ್ಯಾಸಂಸ್ಥೆಗಳ ಕಾರ್ಯದರ್ಶಿ ರೇ.ಫಾ. ಎಡ್ವರ್ಡ್ ವಿಲಿಯಂ ಸಲ್ಡಾನಾ ಹಾಗೂ ಮಡಿಕೇರಿ ವಲಯ ಧರ್ಮಗುರು ಮತ್ತು ಸಂತ ಮೈಕಲರ ದೇವಾಲಯದ ಧರ್ಮಗುರು ಜಾರ್ಜ್ ದೀಪಕ್, ಬೆಂಗಳೂರಿನ ಧರ್ಮಗುರು ಹಾಗೂ ಸಂತ ಅಂತೋಣಿ ದೇವಾಲಯದ ಧರ್ಮಗುರು ವಿಜಯ ಕುಮಾರ್ ನೆರವೇರಿಸಿದರು.

ಹಬ್ಬದ ಸಿದ್ಧತೆಯಾಗಿ 2ನೇ ದಿನದ ಶುಕ್ರವಾರ ಸಂಜೆ 5.30ಕ್ಕೆ ಬಲಿ ಪೂಜೆ ಹಾಗೂ ಆರಾಧನೆಯನ್ನು ಕೆ.ಆರ್. ಪೇಟೆಯ ಬಾಲಯೇಸುವಿನ ದೇವಾಲಯದ ಧರ್ಮಗುರು ಟಿ. ಪೌಲೂಸ್ ನೆರವೇರಿಸುವರು.

ಸ್ವಹಿತ ಅಳಿಸಿ ಸಮಾಜ ಹಿತ ಬೆಳೆಸಿ: ಸೋಮಶೇಖರ್

ತೊರೆನೂರು ವಿರಕ್ತ ಮಠದಲ್ಲಿ ಮಾಸಿಕ ಚಿಂತನಾ ಗೋಷ್ಠಿ ಕಾರ್ಯಕ್ರಮ

• **ಕನ್ನಡಪ್ರಭವಾರ್ತೆ** ಕುಶಾಲನಗರ

ಬಸವಾದಿ ಶರಣರ ಚಿಂತನೆಗಳನ್ನು ಎಲ್ಲರೂ ಅರಿಯುವ ಮೂಲಕ ಸರ್ವ ಸಮಾನತೆ ಹಾಗೂ ಅಭಿವೃದ್ಧಿ ಶೀಲ ದೇಶ ಕಟ್ಟಲು ಎಲ್ಲರೂ ಕೈಜೋಡಿಸಬೇಕು ಎಂದು ಸಾಮಾಜಿಕ ಚಿಂತಕ ಸೀಬಳ್ಳಿ ಸೋಮಶೇಖರ್‌ಹೇಳಿದರು.

ಕೊಡಗು ಜಿಲ್ಲಾ ಅಖಿಲ ಭಾರತ ವೀರಶೈವ ಮಹಾಸಭಾ ಹಾಗೂ ತೊರೆನೂರು ವಿರಕ್ತ ಮಠದ ಆಶ್ರಯದಲ್ಲಿ ಮಠದ ಆವರಣದಲ್ಲಿ ಹುಣ್ಣಿಮೆ ಅಂಗವಾಗಿ ಹಮ್ಮಿಕೊಂಡಿದ್ದ ಮಾಸಿಕ ಚಿಂತನಾ ಗೋಷ್ಠಿಯಲ್ಲಿ ಮಾತನಾಡಿದರು.

12ನೇ ಶತಮಾನದಲ್ಲಿ ಬಸವಣ್ಣ ಸಮಾನತೆಗಾಗಿ ಹಾಗೂ ಜನರ ಹಕ್ಕುಗಳಿಗಾಗಿ ಹೋರಾಡಿದರು. ಇಂದು ಜನರ ಹಕ್ಕುಗಳನ್ನುನಿರ್ಲಕ್ಷಿಸಿ ಸ್ವಹಿತಾಸಕ್ತಿ ಗಳಿಗಾಗಿ ಕೆಲಸ ಮಾಡುವವರ ಸಂಖ್ಯೆ ಹೆಚ್ಚಿದೆ. ಹಾಗಾಗಿ ಅಸಮಾನತೆ ತಾಂಡವವಾಡುತ್ತಿದೆ. ಸ್ವಾರ್ಥ ಹಾಗೂ ಸ್ವಹಿತ ಬಿಟ್ಟು ಸಮಾಜದ ಹಿತಕ್ಕೆ ತೊಡಗಿಸಿಕೊಳ್ಳುವ ಮಹನೀಯರು ಎಂದಿಗೂ ಎಲ್ಲರ ಮನದಲ್ಲಿ ಉಳಿಯುತ್ತಾರೆ. ಹಾಗೆಯೇ ಬಸವಾದಿ ಶರಣರು, ಶ್ರೇಷ್ಠ ಚಿಂತಕರು, ಸಾಹಿತಿಗಳು ಎಲ್ಲರ ಮನದಲ್ಲಿ ಅಚ್ಚಳಿಯದೇ ಉಳಿಯುತ್ತಾರೆ ಎಂದು ಸೋಮಶೇಖರ್‌ಆಶಿಸಿದರು. ಕಾವೇರಿ ನದಿ ಸ್ವಚ್ಚತಾ ಅಭಿಯಾನದ ಹಾಸನ ಜಿಲ್ಲಾ ಅಧ್ಯಕ್ಷರಾದ ಎಂ. ಎನ್. ಕುಮಾರಸ್ವಾಮಿ ಮಾತನಾಡಿ, ಕುಡಿಯಲು ಯೋಗ್ಯವಲ್ಲದ ಕಾವೇರಿ ನದಿಯ ನೀರನ್ನು ನಾವು ಕಾಣುವಂತಾಗಿದೆ. ನದಿಯನ್ನು ಗೌರವಿಸಿ ನದಿಯಲ್ಲಿನ ನೀರನ್ನು ಸ್ವಚ್ಛಂದವಾಗಿ ಕಾಪಾಡಿದರೆ ತಾಯಿಯನ್ನು ಗೌರವಿಸಿದಂತಾಗುತ್ತದೆ. ಅದ್ದರಿಂದ ಎಲ್ಲರೂ ನದಿಯ ಸಂರಕ್ಷಣೆಗೆ ಮುಂದಾಗಬೇಕಿದೆ. ಹಾಗೆಯೇ ಇಂದಿನ ಮಕ್ಕಳಿಗೆ ಉತ್ತಮ ಸಂಸ್ಕಾರಗಳನ್ನು ಕೊಡುವ ಮೂಲಕ ನಾಳೆಯ ಸತ್ಪ್ರಜೆಗಳನ್ನಾಗಿ ರೂಪಿಸುವ ಹೊಣೆಗಾರಿಕೆ ಪೋಷಕರ ಮೇಲಿದೆ ಎಂದರು. ಕೊಡಗು ಜಿಲ್ಲೆಯ ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷ ಹೆಚ್. ವಿ. ಶಿವಪ್ಪ, ಪ್ರಧಾನ ಕಾರ್ಯದರ್ಶಿ ಶಾಂಬಶಿವಯ್ಯ, ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎಸ್. ಮೂರ್ತಿ, ಕಾರ್ಯದರ್ಶಿ ಬಿ. ನಟರಾಜು, ಶರಣ ಸಾಹಿತ್ಯ ಯುವ ಘಟಕದ ಜಿಲ್ಲಾಧ್ಯಕ್ಷ ಮೋಹನ್, ಬಸವೇಶ್ವರ ಸೌಹಾರ್ದ ಬ್ಯಾಂಕಿನ ಉಪಾಧ್ಯಕ್ಷ ಹೆಚ್.ಪಿ.ಉದಯಕುಮಾರ್, ತೊರೆನೂರು ಬಸವೇಶ್ವರ ದೇವಾಲಯದ ಅಧ್ಯಕ್ಷ ಟಿ.ಬಿ. ಜಗದೀಶ್, ಕೃಷಿಕರಾದ ಗುರುಲಿಂಗಪ್ಪ, ಹುಲುಸೆ ನಾಗಣ್ಣ,ಅಕ್ಕನ ಬಳಗದ ಗೌರವಾಧ್ಯಕ್ಷೆ ವಿಜಯಾ ಪಾಲಾಕ್ಷ, ಕಪನಪ್ಪ, ಚಿದಾನಂದ, ಪ್ರಕಾಶ್, ಸೋಮಶೇಖರಾಚಾರಿ, ಪ್ರೇಮಕುಮಾರ್ ದೇವಾಂಗ ಮತ್ತಿತರರು ಇದ್ದರು. ವಿನಂತ್ ವಚನ ಗಾಯನ ಮಾಡಿದರು.


ತೊರೆನೂರು ವಿರಕ್ತ ಮಠದ ಮಾಸಿಕ ಚಿಂತನಾ ಗೋಷ್ಠಿ ಕಾರ್ಯಕ್ರಮ ನಡೆಯಿತು.

ವೃತ್ತಿ ಕೌಶಲ್ಯ ಹೆಚ್ಚಿಸಿ ಸ್ವ ಉದ್ಯೋಗಿಗಳಾಗಿ: ಕಲಾವತಿ

ಮಹಿಳೆಯರಿಗೆ ಒಂದು ತಿಂಗಳ ಕಿರು ಉದ್ಯಮಶೀಲತೆ ಅಭಿವೃದ್ಧಿ ಕಾರ್ಯಕ್ರಮ

• **ಕನ್ನಡಪ್ರಭ ವಾರ್ತೆ** ಮಡಿಕೇರಿ

ಜೀವನದ ಉನ್ನತ ಹಂತಕ್ಕೇರಲು ಕಲಿಕೆ ಒಂದೇ ಗುರಿಯಾಗಬೇಕು. ಆ ನಿಟ್ಟಿನಲ್ಲಿ ಮಹಿಳೆಯರು ಹೊಸ ಕೌಶಲ್ಯ ಕಲಿಯುವ ಮೂಲಕ ವೃತ್ತಿ ಜೀವನದಲ್ಲಿ ಮತ್ತು ವೈಯಕ್ತಿಕ ಜೀವನದಲ್ಲಿ ಗೌರವ ಹಾಗೂ ಅವಕಾಶ ಗಿಟ್ಟಿಸಿಕೊಳ್ಳಬೇಕು ಎಂದು ಮಡಿಕೇರಿ ನಗರಸಭೆ ಅಧ್ಯಕ್ಷೆ ಪಿ. ಕಲಾವತಿ ಹೇಳಿದರು.

ಬೆಂಗಳೂರಿನ ನಬಾರ್ಡ್ ಸಂಸ್ಥೆ ವತಿಯಿಂದ ಮೈಸೂರಿನ ಓಡಿಪಿ ಸಂಸ್ಥೆ ಸಹಯೋಗದಲ್ಲಿ ನಗರದ ದಾಸವಾಳ ರಸ್ತೆಯಲ್ಲಿರುವ ಬಸಪ್ಪ ಶಿಶು ವಿಹಾರ ಸಭಾಂಗಣದಲ್ಲಿ ಒಂದು ತಿಂಗಳ ಕಾಲ ನಡೆಯಲಿರುವ ಕಿರು ಉದ್ಯಮಶೀಲತೆ ಅಭಿವೃದ್ಧಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಕೊಡಗು ನಬಾರ್ಡ್‌ನ ಜಿಲ್ಲಾ ಅಭಿವೃದ್ಧಿ ಅಧಿಕಾರಿ ವಿ. ರಮೇಶ್ ಬಾಬು ಮಾತನಾಡಿ, ಸಾಮಾಜಿಕ ಜಾಲತಾಣ ಸದುಯೋಗಪಡಿಸಿಕೊಂಡು ತಾವು ತಯಾರಿಸಿದ ಉತ್ಪನ್ನಗಳನ್ನು ಪ್ರಚಾರಪಡಿಸಬಹುದು ಅಥವಾ ಮಾರಾಟ ಮಾಡಬಹುದು. ನಬಾರ್ಡ್ ಸಂಸ್ಥೆ ವತಿಯಿಂದ ಕೊಡಗಿನ ವಿವಿಧೆಡೆ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಮೈಸೂರು ಓಡಿಪಿ ಸಂಸ್ಥೆಯ ಸಹಾಯಕ ನಿರ್ದೇಶಕರಾದ ಫಾದರ್‌ಜಾನ್ ಫರ್ನಾಂಡಿಸ್ ಅವರು ಮೈಸೂರಿನ ಓಡಿಪಿ ಸಂಸ್ಥೆಯು ಒಂದು ಸ್ವಯಂ ಸೇವಾ ಸಂಸ್ಥೆಯಾಗಿದ್ದು, ಸಮಾಜದ ಹಿಂದುಳಿದ, ಬಡ ಜನರ ಸಮಗ್ರ ಅಭಿವೃದ್ಧಿಗಾಗಿ ಕೆಲಸ ಮಾಡುತ್ತಿದೆ ಎಂದರು.

ಮೈಸೂರು ಓಡಿಪಿ ಸಂಸ್ಥೆಯ ಕೌಶಲ್ಯಾಭಿವೃದ್ಧಿ ಯೋಜನೆಯ ಸಂಯೋಜಕ ಲಲಿತಾ ಅವರು ಮಾತನಾಡಿ, ನಬಾರ್ಡ್ ಸಂಸ್ಥೆ ಕಳೆದ ಐದು ವರ್ಷದಿಂದ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಿಕೊಂಡು ಬರುತ್ತಿದೆ ಎಂದರು.

ಓಡಿಪಿ ಸಂಸ್ಥೆಯ ಜಿಲ್ಲಾ ವಲಯ ಸಂಯೋಜಕಿ ಜಾಯ್ಸ್ ಮೆನೇಜೆಸ್ ನಿರೂಪಿಸಿದರು. ಕಾರ್ಯಕರ್ತೆ ವಿಜಯ ನಾರಾಯಣ ಸ್ವಾಗತಿಸಿದರು. ಸದಸ್ಯೆ ತಾರಾ ವಂದಿಸಿದರು. ಓಡಿಪಿ ಸಂಸ್ಥೆಯ ಸಂಯೋಜಕರಾದ ಮೇರಿ ಎಲಿಜಬೆತ್, ಸದಸ್ಯರಾದ ಮನೋರಮೆ, ಮೀನ ಕುಮಾರಿ, ದಮಯಂತಿ, ತರಬೇತುದಾರರಾದ ಹೀನಾ ಮತ್ತು ರಾಧಾ, ಶಿಬಿರಾರ್ಥಿಗಳು ಇದ್ದರು.

> **ಕಲೆ ಮತ್ತು ಕೌಶಲ್ಯ ಎಂಬುದು ಮನುಷ್ಯನ ಸೃಜನ ಶೀಲತೆ ಮತ್ತು ಸಾಮರ್ಥ್ಯದ ಎರಡು ಪ್ರಮುಖ ಮುಖವಾಗಿದ್ದು, ಮಹಿಳೆಯರು ಕೌಶಲ್ಯಾಭಿವೃದ್ಧಿ ಹೆಚ್ಚಿಸಿಕೊಂಡು ಸ್ವಾವಲಂಬಿ ಬದುಕು ಸಾಧಿಸಬೇಕು.**
> ▪ ಟಿ. ಭಾಗ್ಯ ನಂದಮ ಮಡಿಕೇರಿ ಕೇಂದ್ರೀಯ ವಿದ್ಯಾಲಯದ ಪ್ರಾಂಶುಪಾಲರು

ದ್ವಿತೀಯ ಪಿಯುಸಿ-2 ಪರೀಕ್ಷೆ: 399 ಗೈರು

• **ಕನ್ನಡಪ್ರಭ ವಾರ್ತೆ** ಮಂಗಳೂರು

ದ.ಕ. ಜಿಲ್ಲೆಯಲ್ಲಿ ಗುರುವಾರ ನಡೆದ ದ್ವಿತೀಯ ಪಿಯುಸಿ-2ರ ಇತಿಹಾಸ ಪರೀಕ್ಷೆಗೆ 356 ವಿದ್ಯಾರ್ಥಿಗಳು ಹಾಜರಾಗಿದ್ದು, 90 ಮಂದಿ ಗೈರು ಹಾಜರಾಗಿದ್ದರು.

ಗಣಿತ ಪರೀಕ್ಷೆಗೆ 1,971 ವಿದ್ಯಾರ್ಥಿಗಳು ಹಾಜರಾಗಿದ್ದು, 306 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದರು. ಹೋಂ ಸೈನ್ಸ್ ಪರೀಕ್ಷೆಗೆ 10 ವಿದ್ಯಾರ್ಥಿಗಳು ಹಾಜರಾಗಿದ್ದು 3 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದರು ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆ ಪ್ರಕಟಣೆ ತಿಳಿಸಿದೆ.

ಸ್ವಚ್ಛ ಕುಶಾಲನಗರ ಕಾರ್ಯಕ್ರಮ ಮಾದರಿ: ರಾಮಕೃಷ್ಣ ಮೆಚ್ಚುಗೆ


ಸುದ್ದಿಗೋಷ್ಠಿಯಲ್ಲಿ ರೋಟರಿ 3181ರ ರಾಜ್ಯಪಾಲ ಟಿ.ಕೆ. ರಾಮಕೃಷ್ಣ ಮಾತನಾಡಿದರು.

• **ಕನ್ನಡಪ್ರಭ ವಾರ್ತೆ** ಕುಶಾಲನಗರ

ಕುಶಾಲನಗರ ರೋಟರಿ 50ರ ಸಂಭ್ರಮದಲ್ಲಿ ಹಲವಾರು ಸಾಮಾಜಿಕ ಕಾರ್ಯಕ್ರಮಗಳನ್ನು ಕೈಗೆತ್ತಿಕೊಂಡಿದ್ದು, ಸ್ವಚ್ಛ ಕುಶಾಲನಗರ ಕಾರ್ಯಕ್ರಮಗಳು ಇತರರಿಗೆ ಮಾದರಿಯಾಗಿವೆ ಎಂದು ರೋಟರಿ 3181 ರಾಜ್ಯಪಾಲರಾದ ಟಿ.ಕೆ. ರಾಮಕೃಷ್ಣ ಹೇಳಿದರು.

ಕುಶಾಲನಗರ ಸಮೀಪದ ಭುವನಗಿರಿ ಕಸ ವಿಲೇವಾರಿ ಕೇಂದ್ರದಲ್ಲಿ ಹಸಿ ಕಸ ನಿರ್ವಹಣಾ ಘಟಕದ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಂಡ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಕುಶಾಲನಗರ ರೋಟರಿ ಅಧ್ಯಕ್ಷ ಮನು ಪೆಮ್ಮಯ್ಯ, ತ್ಯಾಜ್ಯ ವಿಲೇವಾರಿ ಘಟಕ ಭುವನಗಿರಿಯಲ್ಲಿ ಹಸಿ ಕಸ ನಿರ್ವಹಣಾ ಘಟಕಕ್ಕೆ ಎಸ್‌ಎಲ್‌ಎನ್ ಕಾಫಿ ಸಂಸ್ಥೆ ಮೂಲಕ ಸುಮಾರು 15 ಲಕ್ಷ ಮೊತ್ತದ ಧನ ಸಹಾಯ ಕಲ್ಪಿಸಲಾಗಿದೆ. ಕುಶಾಲನಗರ ಪಟ್ಟಣದ ಹೃದಯ ಭಾಗ ಸೇರಿದಂತೆ ಹಾರಂಗಿ ಚಿಕ್ಲಿಹೊಳೆ ಪ್ರವಾಸಿ ಕೇಂದ್ರಗಳಲ್ಲಿ ಸೇರಿದಂತೆ ಒಟ್ಟು ಎಂಟು ಕಡೆಗಳಲ್ಲಿ ಇಂತಹ ತೊಟ್ಟಿಗಳನ್ನು ನಿರ್ಮಿಸಲಾಗಿದೆ ಎಂದರು.

ರೋಟರಿ ಸಹಾಯಕ ರಾಜ್ಯಪಾಲ ಉಲ್ಲಾಸ್ ಕೃಷ್ಣ, ರೋಟರಿ ಕಾರ್ಯದರ್ಶಿ ಮಂಜುನಾಥ್ ಹೆಚ್ ಪಿ ಇದ್ದರು.

> **ಕುಶಾಲನಗರ ಕೊಪ್ಪ ಗಡಿ ಭಾಗದಲ್ಲಿ ಕಾವೇರಿ ನದಿ ಹಳೆಯ ಸೇತುವೆ ಪುನಶ್ಚೇತನ ಕಾಮಗಾರಿಯೊಂದಿಗೆ ಪಾರ್ಕ್ ನಿರ್ಮಾಣ ಕಾಮಗಾರಿ ನಡೆಯುತ್ತಿದೆ. ಅಂದಾಜು 25 ಲಕ್ಷ ರು. ವೆಚ್ಚದಲ್ಲಿ ಕಾಮಗಾರಿ ನಡೆಯುತ್ತಿದ್ದು, ಈಗಾಗಲೇ ಶೇ. 60ರಷ್ಟು ಕಾಮಗಾರಿ ನಡೆದಿದೆ.**
> ▪ ಟಿ.ಕೆ. ರಾಮಕೃಷ್ಣ ರೋಟರಿ 3181 ರಾಜ್ಯಪಾಲರು

ಸಮಾಜ ಸೇವೆ | ಭುವನಗಿರಿ ರೋಟರಿ ಸಂಸ್ಥೆ ಸುವರ್ಣ ಮಹೋತ್ಸವ ಅಂಗವಾಗಿ ಯೋಜನೆ | 20 ಲಕ್ಷ ರು.ವೆಚ್ಚ

ಕುಶಾಲನಗರ ಪುರಸಭೆ ಹಸಿ ಕಸ ನಿರ್ವಹಣಾ ಘಟಕ ಉದ್ಘಾಟನೆ

• **ಕನ್ನಡಪ್ರಭ ವಾರ್ತೆ** ಕುಶಾಲನಗರ

ತಾಲೂಕಿನ ಕೂಡಿಗೆ ಗ್ರಾ.ಪಂ. ವ್ಯಾಪ್ತಿಯ ಭುವನಗಿರಿಯಲ್ಲಿರುವ ಕುಶಾಲನಗರ ಪುರಸಭೆಯ ಕಸ ವಿಲೇವಾರಿ ಪ್ರದೇಶದಲ್ಲಿ ರೋಟರಿ ಸಂಸ್ಥೆ ಸುವರ್ಣ ಮಹೋತ್ಸವ ಅಂಗವಾಗಿ ಹಾಗೂ ಸ್ವಚ್ಛ ಕುಶಾಲನಗರ ಅಭಿಯಾನದಡಿ 20 ಲಕ್ಷ ರು. ವೆಚ್ಚದಲ್ಲಿ ಹಸಿ ಕಸವನ್ನು ಗೊಬ್ಬರವಾಗಿ ಪರಿವರ್ತಿಸುವ ಹಸಿ ಕಸ ನಿರ್ವಹಣಾ ಘಟಕವನ್ನು ರೋಟರಿ 3181 ಜಿಲ್ಲಾ ರಾಜ್ಯಪಾಲ ಪಿ.ಕೆ. ರಾಮಕೃಷ್ಣ ಉದ್ಘಾಟಿಸಿದರು.

ಈ ಸಂದರ್ಭ ಮಾತನಾಡಿದ ಅವರು, ಕುಶಾಲನಗರ ರೋಟರಿ ಸುವರ್ಣ ಮಹೋತ್ಸವ ಅಂಗವಾಗಿ ಕೈಗೊಂಡಿರುವ ಹಸಿ ಕಸವನ್ನು ಗೊಬ್ಬರವಾಗಿಸುವ ನಿರ್ವಹಣಾ ಘಟಕ ಸ್ಥಾಪನೆ ಕಾರ್ಯ ಉತ್ತಮವಾಗಿದೆ. ಇದೊಂದು ಮಾದರಿ ಕಾರ್ಯಕ್ರಮ. ಇಂತಹ ಕಾರ್ಯ ಯಾವುದೇ ಸಂಸ್ಥೆಯಿಂದ ನಡೆದಿಲ್ಲ. ಇತರೆಡೆ ಇದನ್ನು ಸ್ಥಾಪಿಸುವ ನಿಟ್ಟಿನಲ್ಲಿ ಚಿಂತಿಸಲಾಗುತ್ತಿದೆ. ಕುಶಾಲನಗರ ಪಟ್ಟಣ ಮಾದರಿ ಸ್ವಚ್ಛ ಪಟ್ಟಣವಾಗಲಿ ಎಂದು ಶುಭ ಹಾರೈಸಿದರು.

ಶಾಸಕ ಡಾ. ಮಂತರ್ ಗೌಡ ಅವರು ನೂತನ ಘಟಕವನ್ನು ಪುರಸಭೆ ಮುಖ್ಯಾಧಿಕಾರಿ ಟಿ.ಎಸ್. ಗಿರೀಶ್‌ಗೆ ಹಸ್ತಾಂತರಿಸಿ ಮಾತನಾಡಿ, ಸರ್ಕಾರದ ಕಾರ್ಯಕ್ರಮಗಳ ಜೊತೆಗೆ ರೋಟರಿಯಂತಹ ಸೇವಾ ಸಂಸ್ಥೆಗಳು ಕೈಗೊಳ್ಳುತ್ತಿರುವ ಸಾಮಾಜಿಕ ಸೇವಾ ಕಾರ್ಯ ಶ್ಲಾಘನೀಯ ಎಂದರು.

ಭುವನಗಿರಿಯಲ್ಲಿ ಕಸ ವಿಲೇವಾರಿ ಪ್ರದೇಶದಲ್ಲಿ ಸ್ವಚ್ಛತೆ ಕಾಪಾಡಬೇಕು. ಪರಿಸರ ಮಾಲಿನ್ಯ ಮಾಡದಂತೆ ಎಚ್ಚರಿಕೆ ವಹಿಸಬೇಕು. ಕಾಂಪೌಂಡ್ ಅನ್ನು ಎತ್ತರಿಸುವ ಮೂಲಕ ಸುತ್ತಲಿನ ಪ್ರದೇಶಗಳ ಜನರಿಗೆ ತೊಂದರೆ ಆಗದಂತೆ ಕ್ರಮ ವಹಿಸಬೇಕು ಎಂದು ಮುಖ್ಯಾಧಿಕಾರಿಗೆ ಸೂಚಿಸಿದರು.

ಕುಶಾಲನಗರ ರೋಟರಿ ಸಂಸ್ಥೆಯ ಸುವರ್ಣ ಮಹೋತ್ಸವ ಅಂಗವಾಗಿ ಸ್ವಚ್ಛ ಕುಶಾಲನಗರ ಅಭಿಯಾನಕ್ಕೆ ಎಸ್.ಎಲ್.ಎನ್ ನ ಸಿಎಸ್‌ಆರ್‌ಫಂಡ್ ಮೂಲಕ 15 ಲಕ್ಷ ರು. ವೆಚ್ಚದ ಯಂತ್ರವನ್ನು ಕೊಡುಗೆ ನೀಡಲಾಗಿದೆ. ಕುಶಾಲನಗರ ಪುರಸಭೆ ವ್ಯಾಪ್ತಿಯಲ್ಲಿ ಸಂಗ್ರಹವಾಗುವ ಹಸಿ ಕಸವನ್ನು ಗೊಬ್ಬರವಾಗಿಸುವ ಯೋಜನೆ ಇದಾಗಿದೆ.

ಪುರಸಭೆ ಕುಶಾಲನಗರ ಯೋಜನಾ ಪ್ರಾಧಿಕಾರ ಅಧ್ಯಕ್ಷ ಪ್ರಮೋದ್ ಮುತ್ತಪ್ಪ, ಮುಖ್ಯಾಧಿಕಾರಿ ಗಿರೀಶ್, ಎಸ್.ಎಲ್.ಎನ್ ಉದ್ಯಮಿ ವೆಂಚಟಾಚಲಂ, ರೋಟರಿ ಅಧ್ಯಕ್ಷ ಮನು ಪೆಮ್ಮಯ್ಯ, ಕಾರ್ಯದರ್ಶಿ ಮಂಜುನಾಥ್ ಎಚ್.ಪಿ., ಸಹಾಯಕ ರಾಜ್ಯಪಾಲ ಉಲ್ಲಾಸ್ ಕೃಷ್ಣ, ಹಿರಿಯ ಸದಸ್ಯ ಎಸ್. ಕೆ. ಸತೀಶ್, ಡಾ. ಹರಿ ಎ. ಶೆಟ್ಟಿ, ಎಂ.ಡಿ. ರಂಗಸ್ವಾಮಿ, ಶೋಭಾ ಸತೀಶ್, ಸಜಿ, ರುದ್ರೇಶ್ ಪಟೇಲ್, ನವೀನ್ ಪಿ.ಆರ್., ಅರುಣ್, ಜೇಕಬ್, ಶರ್ಲಿ, ರಾಣಿ ಉಲ್ಲಾಸ್, ಸಿ.ಬಿ. ಹರೀಶ್, ಪ್ರೇಮಚಂದ್ರನ್, ಕ್ರಿಜ್ಬಲ್ ಕೋಟ್ಸ್, ಮಹೇಶ್ ನಲ್ವಡೆ, ಪುರಸಭೆ ಕಂದಾಯಾಧಿಕಾರಿ ರಾಮು, ದಫೆದಾರ್‌ಮೋಹನ್ ಕುಮಾರ್ ಮತ್ತಿತರರು ಪಾಲ್ಗೊಂಡಿದ್ದರು.



ಕುಶಾಲನಗರ ಪುರಸಭೆ ಹಸಿ ಕಸ ನಿರ್ವಹಣಾ ಘಟಕದ ಉದ್ಘಾಟನೆ ನಡೆಯಿತು.

> **ಕುಶಾಲನಗರ ಪಟ್ಟಣ ವೇಗವಾಗಿ ಬೆಳೆಯುತ್ತಿದೆ. ಇಂತಹ ಪಟ್ಟಣದಲ್ಲಿ ಕಸ, ತ್ಯಾಜ್ಯ ನಿರ್ವಹಣೆ ನಿಯಂತ್ರಣ ಇಲ್ಲದಂತೆ ಆಗಿದೆ. ಪುರಸಭೆ ವತಿಯಿಂದ ಮನೆ ಮನೆಗಳಲ್ಲಿ ಕಸ ಸಂಗ್ರಹವನ್ನು ವ್ಯವಸ್ಥಿತವಾಗಿ ಮಾಡಬೇಕು. ಕಸ ವಾಹನ ಹೋಗುವ ಸಮಯ ಸರಿಯಾಗಿ ನಿಗದಿ ಮಾಡಬೇಕು. ಜೊತೆಗೆ ಬಡಾವಣೆಯ ನಾಗರಿಕರು ಕೂಡ ಹಸಿ ಕಸ, ಒಣ ಕಸವನ್ನು ಬೇರ್ಪಡಿಸಿ ವಾಹನಕ್ಕೆ ಹಾಕಬೇಕು. ಇದು ಜನರ ಜವಬ್ದಾರಿ ಕೂಡ ಆಗಿದೆ.**
> ▪ ಡಾ. ಮಂತರ್ ಗೌಡ ಮಡಿಕೇರಿ ಶಾಸಕರು

ಸುದ್ದಿ ಸಿಂಚನ

ಬಂಟ್ವಾಳ: ಜೀವನದಿ ನೇತ್ರಾವತಿ ನದಿಗೆ ತ್ಯಾಜ್ಯ ಎಸೆದವರ ವಿರುದ್ಧ ಪೊಲೀಸ್ ದೂರು

ಬಂಟ್ವಾಳ: ನೇತ್ರಾವತಿ ನದಿಗೆ ತ್ಯಾಜ್ಯ ಎಸೆದು ನೀರು ಕಲುಷಿತಗೊಳಿಸುವ ವರದಿಗೆ ಎಚ್ಚೆತ್ತುಕೊಂಡ ಪುರಸಭೆ ಆತನ ಮೇಲೆ ಬಂಟ್ವಾಳ ನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದೆ.
ಪಾಣೆಮಂಗಳೂರು ವ್ಯಕ್ತಿಯೋರ್ವ ಇತರ ಕಡೆಗಳಿಂದ ತ್ಯಾಜ್ಯಗಳನ್ನು ತಂದು ನೇತ್ರಾವತಿ ನದಿಗೆ ಎಸೆಯುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿತ್ತು. ಅಲ್ಲದೆ ಈ ಬಗ್ಗೆ ಗಣೇಶ್ ನಾಯಕ್ ಎಂಬವರು ಬಂಟ್ವಾಳ ಪುರಸಭೆ ಮುಖ್ಯಾಧಿಕಾರಿಗೆ ದೂರು ನೀಡಿದ್ದರು. ಮಂಗಳೂರಿನ ಜನತೆಗೆ ಕುಡಿಯುವ ನೀರು ಒದಗಿಸುವ ನೇತ್ರಾವತಿ ನದಿಗೆ ಕೊಳೆತ ತ್ಯಾಜ್ಯಗಳನ್ನು ಎಸೆಯುವ ಮೂಲಕ ನೀರು ಕಲುಷಿತ ಮಾಡುವ ಆರೋಪಿಯ ಬಗ್ಗೆ ಕ್ರಮ ಕೈಗೊಳ್ಳಲು ಇವರು ಮನವಿ ಮಾಡಿದ್ದರು. ಈ ಬಗ್ಗೆ ಮಾಧ್ಯಮಗಳಲ್ಲೂ ವರದಿ ಪ್ರಕಟವಾಗಿತ್ತು. ವರದಿಗೆ ಎಚ್ಚೆತ್ತುಕೊಂಡ ಪುರಸಭೆ ಮುಖ್ಯಾಧಿಕಾರಿ ಬಂಟ್ವಾಳ ನಗರ ಪೋಲೀಸರಿಗೆ ದೂರು ನೀಡಿ ಆರೋಪಿ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಕೋರಿದ್ದಾರೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮೋಡ ವಾತಾವರಣ, ಸಾಧಾರಣ ವರ್ಷಧಾರೆ

ಮಂಗಳೂರು: ಕಳೆದ ಒಂದು ವಾರದಿಂದ ವಿಪರೀತ ಸೆಕೆ ಮತ್ತು ಬಿಸಿಲಿನಿಂದ ತತ್ತರಿಸಿ ಹೋಗಿದ್ದ ಕರಾವಳಿಯ ಹಲವೆಡೆ ಗುರುವಾರ ಬೆಳಗ್ಗೆ ಸಾಧರಣ ಮಳೆಯಾಗಿದೆ. ಬೆಳಿಗ್ಗೆಯಿಂದಲೇ ಜಿಲ್ಲೆಯ ಹಲವೆಡೆ ಮೋಡಕವಿದ ವಾತಾವರಣ ಕಂಡುಬಂದಿದೆ.
ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಪ್ರಖರ ಬಿಸಿಲಿನ ಬದಲು ತುಸು ತಂಪಾದ ಹವೆ ಕಂಡುಬಂದಿದೆ. ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ಹೊರವಲಯ ಬಂಟ್ವಾಳ, ಪುತ್ತೂರು ಹಾಗೂ ಬೆಳ್ತಂಗಡಿ ಭಾಗಗಳಲ್ಲಿ ಗುರುವಾರ ಬೆಳಗ್ಗೆ ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ಸಾಧರಣ ಮಳೆಯಾಗಿದೆ. ತಂಪಾದ ಗಾಳಿ ಬೀಸುತ್ತಿರುವುದರಿಂದ ಉಷ್ಣಾಂಶದಲ್ಲಿ 2-3 ಡಿಗ್ರಿ ಸೆಲ್ಸಿಯಸ್ ಕುಸಿತ ಕಂಡುಬಂದಿದೆ. **ಮುಂದಿನ 10 ದಿನ ಮಳೆ:** ಹವಾಮಾನ ಇಲಾಖೆಯ ಮಾಹಿತಿಯಂತೆ, ಕರ್ನಾಟಕದ ಕರಾವಳಿ ಜಿಲ್ಲೆಗಳಲ್ಲಿ ಮುಂದಿನ 10 ದಿನಗಳವರೆಗೆ ಪೂರ್ವ ಮುಂಗಾರು ಮಳೆ ಮುಂದುವರಿಯುವ ಲಕ್ಷಣಗಳಿವೆ. ಸಂಜೆ ಅಥವಾ ರಾತ್ರಿಯ ಅವಧಿಯಲ್ಲಿ ಗುಡುಗು ಸಹಿತ ಸಾಧಾರಣ ಮಳೆಯಾಗುವ ಸಾಧ್ಯತೆ ಹೆಚ್ಚಿದೆ.

ಎನ್‌ಟಿಎ ಪರೀಕ್ಷೆ: ಕಾರ್ಕಳ ಕ್ರಿಯೇಟಿವ್ ಸಂಸ್ಥೆ ಸಾಧನೆ

ಬಿ.ಪ್ಲಾನಿಂಗ್ ಜನರಲ್ ಇಡಬ್ಲ್ಯುಎಸ್ ವಿಭಾಗದಲ್ಲಿ ನಾಗದೇವ್ ಎಂ.ಜಿ ದೇಶಕ್ಕೆ ಪ್ರಥಮ ಸ್ಥಾನ


ಅಭಿರಾಮ್ ಭಟ್


ಅನಿರುದ್ಧ


ದಿಶಂತ್


ನಾಗದೇವ್


ನಮಿತ್


ನಿನಾದ್


ನಿಶಾಂತ್


ಸಮ್ವಿತ್


ಸುಕ್ಷಿತ್ ಗಿರೀಶ್


ಉಲ್ಲಾಸ್ ಪಾಟೀಲ್


ವಿಶ್ವೇಶ್


ವೃಷಭ್

• **ಕನ್ನಡಪ್ರಭವಾರ್ತೆ** ಕಾರ್ಕಳ

ನ್ಯಾಷನಲ್ ಟೆಸ್ಟಿಂಗ್ ಏಜೆನ್ಸಿ (ಎನ್.ಟಿ.ಎ.) ವತಿಯಿಂದ ನಡೆಸಲಾದ ಜೆಇಇ ಬಿ.ಆರ್ಕ್ ಮತ್ತು ಬಿ.ಪ್ಲಾನಿಂಗ್ ಎರಡನೇ ಅವೃತ್ತಿಯ ಫಲಿತಾಂಶ ಪ್ರಕಟಗೊಂಡಿದ್ದು, ಕಾರ್ಕಳದ ಕ್ರಿಯೇಟಿವ್ ಸಂಸ್ಥೆ ರಾಷ್ಟ್ರಮಟ್ಟದಲ್ಲಿ ಗಮನಾರ್ಹ ಸಾಧನೆ ಮಾಡಿದೆ.

ಸಂಸ್ಥೆಯ ವಿದ್ಯಾರ್ಥಿ ನಾಗದೇವ್ ಎಂ.ಜಿ. ಅವರು ಬಿ.ಪ್ಲಾನಿಂಗ್ ವಿಭಾಗದ ಜನರಲ್ ಇಡಬ್ಲ್ಯುಎಸ್ ವಿಭಾಗದಲ್ಲಿ ದೇಶಕ್ಕೆ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ. ಅವರು 99.9762662 ಪರ್ಸೆಂಟೈಲ್ ಗಳಿಸಿದ್ದಾರೆ.

ಬಿ.ಪ್ಲಾನಿಂಗ್ ವಿಭಾಗದಲ್ಲಿ ಸುಕ್ಷಿತ್ ಗಿರೀಶ್ ಗೌಡ 99.7769023, ನಮಿತ್ ಕೃಷ್ಣಮೂರ್ತಿ ಹೆಗಡೆ 99.4570078, ವಿಶ್ವೇಶ್ ಎನ್.ಹೆಚ್. 99.3484094, ನಿಶಾಂತ್ ಹೊನ್ನಾವರ್ 99.3164686, ಅನಿರುಧ್ ಉಪಾಧ್ಯಾಯ 98.8948512, ಅಭಿರಾಮ್ ಭಟ್ ಜಿ.ಪಿ. 98.3718612, ಉಲ್ಲಾಸ್ ವೈ. ಪಾಟೀಲ್ 98.2560368, ದಿಶಾಂತ್ ಎಂ. 98.2152181, ವೃಷಬ್ ಮಂಜುನಾಥ್ ಬೆನ್ನಿ 98.1666028, ಸಂವಿತ್ ಅಮಿತ್ ಗೋಕರ್ಣ 98.1107894 ಹಾಗೂ ನಿನಾದ್ ರಾಜೇಶ್ ನಾಯಕ್ 98.0490815 ಪರ್ಸೆಂಟೈಲ್ ಪಡೆದಿದ್ದಾರೆ.

ಈ ವಿಭಾಗದಲ್ಲಿ 99 ಪರ್ಸೆಂಟೈಲ್‌ಗಿಂತ ಹೆಚ್ಚು 5 ಮಂದಿ, 98 ಪರ್ಸೆಂಟೈಲ್‌ಗಿಂತ ಹೆಚ್ಚು 12 ಮಂದಿ, 97 ಪರ್ಸೆಂಟೈಲ್‌ಗಿಂತ ಹೆಚ್ಚು 16 ಮಂದಿ, 95 ಪರ್ಸೆಂಟೈಲ್‌ಗಿಂತ ಹೆಚ್ಚು 22 ಮಂದಿ ಹಾಗೂ 90 ಪರ್ಸೆಂಟೈಲ್‌ಗಿಂತ ಹೆಚ್ಚು 31 ಮಂದಿ ವಿದ್ಯಾರ್ಥಿಗಳು ಸಾಧನೆ ಮಾಡಿದ್ದಾರೆ.

ಬಿ.ಆರ್ಕ್ ವಿಭಾಗದಲ್ಲಿ ನಾಗದೇವ್ ಎಂ.ಜಿ. ದೇಶಕ್ಕೆ 5ನೇ ರ್ಯಾಂಕ್ ಪಡೆದು, ಗಣಿತಶಾಸ್ತ್ರದಲ್ಲಿ 100 ಪರ್ಸೆಂಟೈಲ್ ಗಳಿಸಿ ಒಟ್ಟಾರೆ 99.8894999 ಪರ್ಸೆಂಟೈಲ್ ಪಡೆದಿದ್ದಾರೆ. ಅನಿರುಧ್ ಉಪಾಧ್ಯಾಯ 98.296243 ಹಾಗೂ ವಿಶ್ವೇಶ್ ಎನ್.ಹೆಚ್. 98.1317778 ಪರ್ಸೆಂಟೈಲ್ ಗಳಿಸಿದ್ದಾರೆ.

ಬಿ.ಆರ್ಕ್ ವಿಭಾಗದಲ್ಲಿ 99 ಪರ್ಸೆಂಟೈಲ್‌ಗಿಂತ ಹೆಚ್ಚು 1 ಮಂದಿ, 98 ಪರ್ಸೆಂಟೈಲ್‌ಗಿಂತ ಹೆಚ್ಚು 3 ಮಂದಿ, 97 ಪರ್ಸೆಂಟೈಲ್‌ಗಿಂತ ಹೆಚ್ಚು 11 ಮಂದಿ, 95 ಪರ್ಸೆಂಟೈಲ್‌ಗಿಂತ ಹೆಚ್ಚು 20 ಮಂದಿ ಹಾಗೂ 90 ಪರ್ಸೆಂಟೈಲ್‌ಗಿಂತ ಹೆಚ್ಚು 40 ಮಂದಿ ವಿದ್ಯಾರ್ಥಿಗಳು ಉತ್ತಮ ಫಲಿತಾಂಶ ಪಡೆದಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಆಡಳಿತ ಮಂಡಳಿ, ಪ್ರಾಂಶುಪಾಲರು, ಪರೀಕ್ಷಾ ಸಂಯೋಜಕರಾದ ಸುಮಂತ್ ದಾಮ್ಲೆ, ಉಪನ್ಯಾಸಕರು ಹಾಗೂ ಬೋಧಕೇತರ ಸಿಬ್ಬಂದಿ ಅಭಿನಂದನೆ ಸಲ್ಲಿಸಿದ್ದಾರೆ.

ತಿಮರೋಡಿ ನಿರೀಕ್ಷಣಾ ಜಾಮೀನು ಅರ್ಜಿ ವಜಾ

ಮಂಗಳೂರು: ಯಕ್ಷಗಾನ ಕಲಾವಿದರು ಮತ್ತು ಹೆತ್ತವರ ಬೆದರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಹೇಶ್ ಶೆಟ್ಟಿ ತಿಮರೋಡಿ ನಿರೀಕ್ಷಣಾ ಜಾಮೀನು ಅರ್ಜಿ ಮಂಗಳೂರಿನ ಆರನೇ ಜಿಲ್ಲಾ, ಸತ್ರ ನ್ಯಾಯಾಲಯದಲ್ಲಿ ವಜಾಗೊಂಡಿದೆ.

ಯಕ್ಷಗಾನ ಕಲಾವಿದ ಪ್ರಜ್ವಲ್ ಕುಮಾರ್‌ಅವರ ಜತೆ ಮೊಬೈಲ್ ನಲ್ಲಿ ಮಾತನಾಡುವ ವೇಳೆ ಮಹೇಶ್ ಶೆಟ್ಟಿ ತಿಮರೋಡಿ, ಯಕ್ಷಗಾನ ಕಲಾವಿದ ದಿನೇಶ್ ಕೊಡಪದವು ಹಾಗೂ ಅವರ ತಾಯಿಯ ಬಗ್ಗೆ ಅವಹೇಳನವಾಗಿ ಮಾತನಾಡಿದ್ದರು. ಈ ಬಗ್ಗೆ ದಿನೇಶ್ ಅವರ ತಾಯಿ, ಲೀಲಾವತಿ ಶೆಟ್ಟಿಗಾರ್ ಪುತ್ತೂರಿನ ಮಹಿಳಾ ಠಾಣೆಯಲ್ಲಿ ಏ.13ರಂದು ಪ್ರಕರಣ ದಾಖಲಿಸಿದ್ದರು. ಕಲಾವಿದರಾದ ಸುಂದರ ರೈ, ಪ್ರಜ್ವಲ್ ಕುಮಾರ್‌ಅವರಿಗೂ ಬೈದಿರುವ ಬಗ್ಗೆ ಪ್ರಕರಣದಲ್ಲಿ ಉಲ್ಲೇಖಿಸಲಾಗಿತ್ತು.

ಸರಕಾರದ ಪರವಾಗಿ ಸರ್ಕಾರಿ ಅಭಿಯೋಜಕ ಮೋಹನ್ ಕುಮಾರ್ ಬಿ. ವಾದ ಮಂಡಿಸಿ, ತಿಮರೋಡಿ ವಿರುದ್ಧ 1992ರಿಂದ ಇಲ್ಲಿಯವರಗೆ 31 ಕ್ರಿಮಿನಲ್ ಪ್ರಕರಣಗಳು ದಾಖಲಾಗಿರುವ ಬಗ್ಗೆ ಹಾಗೂ ಇತ್ತೀಚೆಗೆ ಸುಪ್ರೀಂ ಕೋರ್ಟ್‌ನಲ್ಲಿ 21 ಕ್ರಿಮಿನಲ್ ಪ್ರಕರಣ ಇರುವ ಆರೋಪಿಯ ನಿರೀಕ್ಷಣ ಜಾಮೀನು ಅರ್ಜಿ ವಜಾಗೊಳಿಸಿರುವ ಬಗ್ಗೆ ಉಲ್ಲೇಖಿಸಿದ್ದರು.

ಪಾಕ್ ಪರ ಘೋಷಣೆ ಕೂಗಿದ್ದ ವ್ಯಕ್ತಿ ಹತ್ಯೆ: ಆರೋಪಿಗೆ ಬೇಲ್

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಮಂಗಳೂರಿನಲ್ಲಿ ಕ್ರಿಕೆಟ್ ಪಂದ್ಯದ ವೇಳೆ 'ಪಾಕಿಸ್ತಾನ್ ಪಾಕಿಸ್ತಾನ್' ಎಂದು ಕೂಗಿಕೊಂಡು ಮೈದಾನದ ಒಳಗೆ ನುಗ್ಗಿದ ಮೇಲೆ ಮುಸ್ಲಿಂ ವ್ಯಕ್ತಿ ಹತ್ಯೆ ಆರೋಪದಲ್ಲಿ ಬಂಧನಕ್ಕೆ ಒಳಗಾಗಿರುವ ಆರೋಪಿಗೆ ಹೈಕೋರ್ಟ್ ಗುರುವಾರ ಜಾಮೀನು ಮಂಜೂರು ಮಾಡಿದೆ.

ಪ್ರಕರಣ ಸಂಬಂಧ ಜಾಮೀನು ಕೋರಿ ಮೂರನೇ ಆರೋಪಿ ದಕ್ಷಿಣ ಕನ್ನಡ ಜಿಲ್ಲೆಯ ವಾಮಂಜೂರು-ತಿರುವೈಲ್‌ನ ಮಂಜ ಅಲಿಯಾಸ್ ಮಂಜುನಾಥ್ ಸಲ್ಲಿಸಿದ್ದ ಅರ್ಜಿಯನ್ನು ಪುರಸ್ಕರಿಸಿದ ನ್ಯಾಯಮೂರ್ತಿ ವಿ.ಶ್ರೀಶಾನಂದ ಅವರ ಪೀಠ ಈ ಆದೇಶ ಮಾಡಿದೆ.

ಪ್ರಕರಣದಲ್ಲಿನ ತನಿಖೆ ವಿಧಾನ ಮತ್ತು ಒಂದೇ ಪ್ರಕರಣಕ್ಕೆ ಸಂಬಂಧಿಸಿ ಎರಡನೇ ಎಫ್‌ಐಆರ್ ದಾಖಲಿಸಿರುವುದಕ್ಕೆ ಪೊಲೀಸರನ್ನು ನ್ಯಾಯಪೀಠ ತರಾಟೆಗೆ ತೆಗೆದುಕೊಂಡಿತು.

ಸಾವಿಗೀಡಾದ ಮೊಹಮ್ಮದ್ ಅಶ್ರಫ್ ಅವರ ಅಂಗಾಂಗಗಳಿಗೆ ಖಾರದ ಪುಡಿ ಹಾಕಲಾಗಿದೆ ಎಂದು ಪೊಲೀಸರು ವರದಿಯಲ್ಲಿ ಹೇಳುತ್ತಾರೆ. ಆದರೆ, ಘಟನಾ ಸ್ಥಳದಲ್ಲಿ ಅಥವಾ ತನಿಖೆಯ ಮಹಜರ್ ವೇಳೆ ಸ್ಥಳದಲ್ಲಿ ಖಾರದಪುಡಿ ಪತ್ತೆಯಾಗಿಲ್ಲ. ಕೃತ್ಯದಲ್ಲಿ ಯಾವುದೇ ಮಾರಕಾಸ್ತ್ರಗಳನ್ನು ಬಳಸಲಾಗಿಲ್ಲ ಮತ್ತು ಇದು ಪೂರ್ವನಿಯೋಜಿತ ಕೃತ್ಯವಲ್ಲ. ಘಟನೆ ಕ್ಷಣಮಾತ್ರದಲ್ಲಿ ನಡೆದಿದೆ. ಒಂದೇ ಪ್ರಕರಣಕ್ಕೆ ಎರಡು ಎಫ್‌ಐಆರ್ ದಾಖಲಿಸಲು ಕಾನೂನಿನಲ್ಲಿ ಅವಕಾಶವಿಲ್ಲ ಎಂದು ಪೀಠ ಕಿಡಿಕಾರಿದೆ.

ಪ್ರಕರಣ ಸಂಬಂಧ 21 ಆರೋಪಿಗಳ ವಿರುದ್ಧ ಪೊಲೀಸರು ಸಕ್ಷಮ ನ್ಯಾಯಾಲಯಕ್ಕೆ ಆರೋಪ ಪಟ್ಟಿ ಸಲ್ಲಿಸಿದ್ದಾರೆ.